ಸಂಪುಟ : 11 ಸಂಚಿಕೆ: 01 ಪುಟ : 4+2 ಬೆಲೆ: 3.00 ಸೋಮವಾರ ಜನವರಿ 26 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 01 Pages : 4+2 Price : 3.00 Monday January 26 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಅಕ್ಷರ ನಡಿಗೆಗೆ ದಶಕದ ಸಾರ್ಥಕತೆ

### ಸತ್ಯದ ಹಾದಿಯಲ್ಲಿ ವಿಜಯಸಾಕ್ಷಿಯ 11ನೇ ಹೆಜ್ಜೆ

ಇವತ್ತು ಇಡೀ ದೇಶವೇ ಗಣರಾಜ್ಯೋತ್ಸವದ ಸಂಭ್ರಮದಲ್ಲಿದೆ. ಸಂವಿಧಾನದ ಆಶಯಗಳಾದ ಸ್ವಾತಂತ್ರ್ಯ, ಸಮಾನತೆ ಮತ್ತು ಅಭಿವ್ಯಕ್ತಿ ಸ್ವಾತಂತ್ರ್ಯವನ್ನು ಆಚರಿಸುತ್ತಿರುವ ಈ ಶುಭದಿನದಂದೇ ನಿಮ್ಮ ನೆಚ್ಚಿನ 'ವಿಜಯಸಾಕ್ಷಿ' ಪತ್ರಿಕೆ ಹತ್ತು ವಸಂತಗಳನ್ನು ಯಶಸ್ವಿಯಾಗಿ ಪೂರೈಸಿ 11ನೇ ವರ್ಷಕ್ಕೆ ಕಾಲಿಡುತ್ತಿದೆ.

ವಿಜಯಸಾಕ್ಷಿ ಪಾಲಿಗೆ ಇದು ಕೇವಲ ಒಂದು ಕ್ಯಾಲೆಂಡರ್ ವರ್ಷದ ಬದಲಾವಣೆಯಲ್ಲ, ಸವಾಲುಗಳ ಸುಳಿಯಲ್ಲೂ ಸತ್ಯವನ್ನು ಸಾರುತ್ತಾ ಸಾಗಿದ ಸಾರ್ಥಕ ಪಯಣದ ಯಶೋಗಾಥೆ.

ವರ್ಷದಿಂದ ವರ್ಷಕ್ಕೆ ಮುದ್ರಣ ಮಾಧ್ಯಮವು ಅಗ್ನಿಪರೀಕ್ಷೆಯಿಂದ ಸಾಗುತ್ತಲೇ ಇದೆ. ಡಿಜಿಟಲ್ ಕ್ರಾಂತಿಯ ಅಬ್ಬರ ಮತ್ತು ಆರ್ಥಿಕ ಸಂಕಷ್ಟಗಳ ನಡುವೆ ಪತ್ರಿಕೆಗಳನ್ನು ನಡೆಸುವುದು ಸುಲಭದ ಮಾತಲ್ಲ. ಕಾಗದದ ಬೆಲೆಯೇರಿಕೆ ಮತ್ತು ಹಂಚಿಕೆಯ ಸವಾಲುಗಳ ನಡುವೆಯೂ ವಿಜಯಸಾಕ್ಷಿ ಕುಗ್ಗಿಲ್ಲ. ಇದಕ್ಕೆ ಕಾರಣ, ಪತ್ರಿಕೆಯ ಆರಂಭದ ದಿನದಿಂದಲೂ ನಾವು ನಂಬಿರುವ 'ವಾಸ್ತವ, ವಿಭಿನ್ನ ಮತ್ತು ವಸ್ತುನಿಷ್ಠ' ಎಂಬ ತತ್ವಗಳು. ಈ ಧ್ಯೇಯವೇ ನಮಗೆ ಅಕ್ಷರ ಲೋಕದಲ್ಲಿ ದಾರಿ ತೋರುವಂತೆ ಮಾಡಿದೆ.

ವಿಜಯಸಾಕ್ಷಿ ಪತ್ರಿಕೆಗೆ ಓದುಗರೇ ಉಸಿರು. ಕಳೆದ ಒಂದು ದಶಕದಲ್ಲಿ ನೀವು ನೀಡಿದ ಪ್ರೋತ್ಸಾಹ ಅವಿಸ್ಮರಣೀಯ. ನಮ್ಮ ಸುದ್ದಿಗಳ ಸತ್ವವನ್ನು ಗುರುತಿಸಿ, ತಪ್ಪುಗಳಾದಾಗ ತಿದ್ದಿ, ಒಳಿತಾದಾಗ ಬೆನ್ನುತಟ್ಟಿದ ಆ ಪ್ರಬುದ್ಧ ಓದುಗ ಬಳಗವೇ ನಮ್ಮ ಅತಿ ದೊಡ್ಡ ಆಸ್ತಿ. ನಮ್ಮ ಓದುಗರ ಗಾತ್ರ ಸಣ್ಣದಿರಬಹುದು, ಆದರೆ ಸತ್ವಯುತವಾಗಿದೆ. ಆ ಕಾರಣಕ್ಕಾಗಿಯೇ ಮುದ್ರಣ ಮಾಧ್ಯಮದ ನಂಬಿಕೆಯನ್ನು ನಾವು ಡಿಜಿಟಲ್ ವೇದಿಕೆಯಲ್ಲೂ ಕಾಪಾಡಿಕೊಂಡು ಬಂದಿದ್ದೇವೆ.

11ನೇ ವರ್ಷಕ್ಕೆ ಪಾದಾರ್ಪಣೆ ಮಾಡುತ್ತಿರುವ ಈ ಹೊತ್ತಿನಲ್ಲಿ ನಮ್ಮ ಮುಂದೆ ಹೊಸ ಕನಸುಗಳಿವೆ. ಬದಲಾಗುತ್ತಿರುವ ತಂತ್ರಜ್ಞಾನಕ್ಕೆ ಒಗ್ಗಿಕೊಳ್ಳುತ್ತಲೇ ಪತ್ರಿಕೋದ್ಯಮದ ನೈತಿಕತೆಯನ್ನು ಕಾಯ್ದುಕೊಳ್ಳುವುದು ನಮ್ಮ ಮೊದಲ ಆದ್ಯತೆ. ವಿಜಯಸಾಕ್ಷಿ ಕೇವಲ ಪತ್ರಿಕೆಯಲ್ಲ, ಅದೊಂದು ಸಾಮಾಜಿಕ ಜವಾಬ್ದಾರಿ. ಈ ಹೊಣೆಗಾರಿಕೆಯನ್ನು ಮುಂದಿನ ದಿನಗಳಲ್ಲಿ ಮತ್ತಷ್ಟು ಗಟ್ಟಿಯಾಗಿ ನಿಭಾಯಿಸಲಿದ್ದೇವೆ.

ಸಂವಿಧಾನದ ಆಶಯಗಳನ್ನು ಎತ್ತಿ ಹಿಡಿಯುತ್ತಾ ವಿಜಯಸಾಕ್ಷಿ ಸದಾ ನಿಮ್ಮೊಂದಿಗೆ ಇರಲಿದೆ. ನಮ್ಮ ಈ ದಶಕದ ಸುದೀರ್ಘ ಪಯಣದಲ್ಲಿ ಅನೇಕ ಜನ ಪ್ರತ್ಯಕ್ಷವಾಗಿ, ಪರೋಕ್ಷವಾಗಿ ಸಹಾಯ-ಸಹಕಾರ ನೀಡಿದ್ದಾರೆ. ಮಾರ್ಗದರ್ಶನ ಮಾಡಿದ್ದಾರೆ. ತಪ್ಪಾದಾಗ ತೆಗಳಿ, ಸರಿದಾರಿಯಲ್ಲಿ ನಡೆಯಲು ಕಾರಣರಾಗಿದ್ದಾರೆ. ಅವರೆಲ್ಲರಿಗೂ ಮನಃಪೂರ್ವಕವಾಗಿ ಕೃತಜ್ಞತೆಗಳು.

ಗಣರಾಜ್ಯದ ಈ ಶುಭ ದಿನದಂದು ಹೊಸ ಭರವಸೆಯೊಂದಿಗೆ ವಿಜಯಸಾಕ್ಷಿ ಪಯಣ ಮುಂದವರಿಯಲಿದೆ.

ಧನ್ಯವಾದಗಳು

**-ಎಚ್.ಎಂ. ಶರೀಫನವರ್, ಪ್ರಧಾನ ಸಂಪಾದಕ**

## ಸಚಿವ ಎಚ್.ಕೆ. ಪಾಟೀಲರಿಂದ ಜನಸ್ನೇಹಿ ಆರೋಗ್ಯ ಸೇವೆ 'ನಮ್ಮ ಕ್ಲಿನಿಕ್'ಗೆ ಚಾಲನೆ

# ನಿಮ್ಮ ಆರೋಗ್ಯಕ್ಕೆ ನಮ್ಮ ಆದ್ಯತೆ



**■ವಿಜಯಸಾಕ್ಷಿ ಸುದ್ದಿ, ಗದಗ**

ಒಂದು ವರ್ಷದ ಅವಧಿಯಲ್ಲಿ ಇಲ್ಲಿನ ಕುಟುಂಬಗಳ ಆರೋಗ್ಯದಲ್ಲಿ ಸ್ಪಷ್ಟ ಸುಧಾರಣೆ ಆಗಬೇಕು ಎಂಬುದು ನಮ್ಮ ಗುರಿ. ಜನರ ಆರೋಗ್ಯದ ಕಾಳಜಿ ಈ 'ನಮ್ಮ ಕ್ಲಿನಿಕ್'ಗಳ ಮೂಲಕ ಸಾಧ್ಯವಾಗಲಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ. ಪಾಟೀಲ ವಿಶ್ವಾಸ ವ್ಯಕ್ತಪಡಿಸಿದರು.

ನಗರದ ಡೋರಗಲ್ಲಿ, ಕುರಹಟ್ಟಿ ಪೇಟೆ, ಹಮಾಲರ ಕಾಲೋನಿ ಹಾಗೂ ಆಶ್ರಯ ಕಾಲೊನಿಯಲ್ಲಿ ಸ್ಥಾಪಿಸಲಾದ ನೂತನ 'ನಮ್ಮ ಕ್ಲಿನಿಕ್'ಗಳನ್ನು ರವಿವಾರ ಉದ್ಘಾಟಿಸಿ ಸಚಿವರು ಮಾತನಾಡಿದರು.

ಗದಗ ನಗರದ ಆರೋಗ್ಯ ಜಾಲವನ್ನು ಗಣನೀಯವಾಗಿ ವಿಸ್ತರಿಸಲಾಗುತ್ತಿದೆ. ಪ್ರತಿ ಕ್ಲಿನಿಕ್ ಮೂಲಕ ಸುಮಾರು 3 ಸಾವಿರ ಕುಟುಂಬಗಳಿಗೆ ಆರೋಗ್ಯ ಸೇವೆ ಒದಗಿಸಲಾಗುತ್ತದೆ. ಬಡ ಜನರ ಆರೋಗ್ಯ ಸುಧಾರಣೆಯಲ್ಲಿ 'ನಮ್ಮ ಕ್ಲಿನಿಕ್' ಬಹುಮುಖ್ಯ ಪಾತ್ರ ವಹಿಸಲಿದೆ ಎಂದು ತಿಳಿಸಿದರು.

ಸ್ಥಳೀಯ ನಾಗರಿಕರು ಈ ಸೇವೆಯನ್ನು ಸದುಪಯೋಗಪಡಿಸಿಕೊಳ್ಳುವಂತೆ ಕರೆ ನೀಡಿದ ಸಚಿವರು, ಸಾರ್ವಜನಿಕ ಆರೋಗ್ಯ ಸುಧಾರಣೆಗೆ ಸರ್ಕಾರ ಹೆಚ್ಚಿನ ಆದ್ಯತೆ ನೀಡುತ್ತಿದೆ. ನಿಮ್ಮ ಆರೋಗ್ಯ, ನಮ್ಮ ಆದ್ಯತೆ ಎಂಬ ಧ್ಯೇಯವಾಕ್ಯದೊಂದಿಗೆ ಗದಗ ನಗರದಲ್ಲಿ ಸರ್ಕಾರದ 'ನಮ್ಮ ಕ್ಲಿನಿಕ್' ಯೋಜನೆ ಯಶಸ್ವಿಯಾಗಿ ಜನಸಾಮಾನ್ಯರ ಆರೋಗ್ಯ ಸೇವೆಗೆ ಹೊಸ ಆಯಾಮ ನೀಡಲಿದೆ ಎಂದು ಹೇಳಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ ಮಾತನಾಡಿ, ಜಿಲ್ಲೆಯಲ್ಲಿ ಒಟ್ಟು 21 'ನಮ್ಮ ಕ್ಲಿನಿಕ್'ಗಳು ಕಾರ್ಯನಿರ್ವಹಿಸುತ್ತಿದ್ದು, ಅದರಲ್ಲಿ ಗದಗ ನಗರದಲ್ಲೇ 7 ಕ್ಲಿನಿಕ್‌ಗಳು ಸೇವೆ ನೀಡುತ್ತಿವೆ. ಪ್ರತಿ 15 ಸಾವಿರ ಜನರಿಗೆ ಒಂದು ಕ್ಲಿನಿಕ್ ಸ್ಥಾಪಿಸುವ ಗುರಿಯೊಂದಿಗೆ ಈ ಯೋಜನೆ ಜಾರಿಯಲ್ಲಿದೆ ಎಂದು ತಿಳಿಸಿದರು.

ಪ್ರತಿ ಕ್ಲಿನಿಕ್‌ನಲ್ಲಿ ನಾಲ್ವರು ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿದ್ದು, ಸಾರ್ವಜನಿಕರಿಗೆ ಸಾಂಕ್ರಾಮಿಕ ರೋಗಗಳಿಗೆ ಚಿಕಿತ್ಸೆ, ಉಚಿತ ಔಷಧಿ ವಿತರಣೆ, ಮೂಲಭೂತ ಆರೋಗ್ಯ ಪರೀಕ್ಷೆಗಳು ಹಾಗೂ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳ ಅನುಷ್ಠಾನ ನಡೆಯುತ್ತಿದೆ. ವಾರಕ್ಕೊಮ್ಮೆ ಸಾರ್ವಜನಿಕರಿಗೆ ಯೋಗಾಭ್ಯಾಸವನ್ನು ಆಯೋಜಿಸಲಾಗುತ್ತಿದ್ದು, ದೈಹಿಕ ಹಾಗೂ ಮಾನಸಿಕ ಆರೋಗ್ಯ ಸುಧಾರಣೆಗೆ ಒತ್ತು ನೀಡಲಾಗುತ್ತಿದೆ. ಈ ಎಲ್ಲಾ ಸೇವೆಗಳ ಸದುಪಯೋಗ ಪಡೆದುಕೊಳ್ಳುವಂತೆ ಸಾರ್ವಜನಿಕರಿಗೆ ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಸಿದ್ದು ಪಾಟೀಲ, ಎಸ್.ಎನ್. ಬಳ್ಳಾರಿ, ಕೃಷ್ಣ ಪರಾಪುರ, ಯುವರಾಜ ಬಳ್ಳಾರಿ, ಮರ್ಕಾಂಡಪ್ಪ ಹಾದಿಮನಿ, ದುರಗೇಶ್ ವಿಭೂತಿ, ಪೌರಾಯುಕ್ತ ರಾಜಾರಾಮ್ ಪವಾರ, ಡಾ. ವೆಂಕಟೇಶ ರಾಠೋಡ್, ಡಾ. ಗಡಾದ, ಡಾ. ಪ್ರೀತಂ ಖೋತ್, ಎಲ್.ಕೆ. ಜೂಲಕಟ್ಟಿ, ಡಾ. ಗಿರಡ್ಡಿ, ಅ. ಮಹಮ್ಮದ್ ಮುಸ್ತಾಪ, ಶಾಕೀರ್ ಕಾತರಕಿ, ಉಸ್ಮಾನ್ ಮಾಳೊಕೊಪ್ಪ, ವಿತೇಂದ್ರಸಿಂಗ ರಜಪೂತ್ ಇದ್ದರು.

> ಸರ್ಕಾರದ ಉದ್ದೇಶ ಜನಸಾಮಾನ್ಯರಿಗೆ ಮನೆಬಾಗಿಲಿನಲ್ಲೇ ಗುಣಮಟ್ಟದ ಆರೋಗ್ಯ ಸೇವೆ ಒದಗಿಸುವುದಾಗಿದೆ. 'ನಮ್ಮ ಕ್ಲಿನಿಕ್' ಯೋಜನೆಯ ಮೂಲಕ ನಗರದ ಬಡ ಹಾಗೂ ಮಧ್ಯಮ ವರ್ಗದ ಜನರಿಗೆ ತಕ್ಷಣದ ಚಿಕಿತ್ಸಾ ಸೌಲಭ್ಯ ದೊರೆಯಲಿದೆ. ನಗರದ ವಿವಿಧ ಭಾಗಗಳಲ್ಲಿ ಸ್ಥಾಪಿಸಲಾದ ಈ ಕ್ಲಿನಿಕ್‌ಗಳಿಂದ ಸಣ್ಣಪುಟ್ಟ ರೋಗಗಳಿಗೆ ಚಿಕಿತ್ಸೆ, ಉಚಿತ ಔಷಧಿ ವಿತರಣೆ, ರಕ್ತದೊತ್ತಡ, ಮಧುಮೇಹ ಸೇರಿದಂತೆ ಮೂಲಭೂತ ಆರೋಗ್ಯ ಪರೀಕ್ಷೆಗಳು ಸುಲಭವಾಗಿ ಲಭ್ಯವಾಗಲಿವೆ.
>
> **- ಎಚ್.ಕೆ. ಪಾಟೀಲ.**
>
> ಜಿಲ್ಲಾ ಉಸ್ತುವಾರಿ ಸಚಿವರು.





# ಶ್ರೀ ಬೀರಲಿಂಗೇಶ್ವರ ಜಾತ್ರೆ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ತಿಮ್ಮಾಪೂರ ಗ್ರಾಮದ ಶ್ರೀ ಬೀರಲಿಂಗೇಶ್ವರ ಜಾತ್ರಾ ಮಹೋತ್ಸವ ಜನವರಿ 26ರಂದು ನಡೆಯಲಿದೆ. ಅಂದು ಬೆಳಿಗ್ಗೆ ದೇವರಿಗೆ ಪಂಚಾಮೃತ ಅಭಿಷೇಕ ಹಾಗೂ ವಿಶೇಷ ಪೂಜೆ ಸಲ್ಲಿಸಲಾಗುವುದು.

ದೇವರಿಗೆ ಚಿನ್ನ, ಬೆಳ್ಳಿ ಆಭರಣಗಳಿಂದ ಅಲಂಕಾರ ಮಾಡಿದ ಬಳಿಕ ಭಕ್ತರ ದರ್ಶನಕ್ಕೆ ಅವಕಾಶ ನೀಡಲಾಗುವುದು. ಬೆಳಿಗ್ಗೆ 10 ಗಂಟೆಗೆ ದೇವರ ಗಂಗಾ ಪೂಜೆಯ ನಂತರ ಪಲ್ಲಕ್ಕಿ ಮೆರವಣಿಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಂಚರಿಸಲಿದೆ.

ನಂತರ ಮಹಾ ಪ್ರಸಾದ ಹಾಗೂ ಸಾಯಂಕಾಲ ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ ಎಂದು ಶ್ರೀ ಬೀರಲಿಂಗೇಶ್ವರ ಟ್ರಸ್ಟ್ ಕಮಿಟಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದೆ.

# 'ಕಲ್ಟ್' ಚಲನಚಿತ್ರ ಅದ್ಧೂರಿ ಪ್ರಾರಂಭ



■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಇಲ್ಲಿನ ಶಾರದಾ ಚಿತ್ರಮಂದಿರದಲ್ಲಿ ಸಚಿವ ಜಮೀರ್ ಅಹ್ಮದ್ ಖಾನ್ ಪುತ್ರ ಜೈದ್ ಖಾನ್ ನಟನೆಯ ಕಲ್ಟ್ ಚಿತ್ರದ ಪ್ರದರ್ಶನಕ್ಕೂ ಮುನ್ನ ಅವರ ಅಭಿಮಾನಿಗಳು ಪಟಾಕಿ ಸಿಡಿಸಿ ಜಾಂಜ್ ಮೇಳದೊಂದಿಗೆ ಸಂಭ್ರಮಿಸಿದರು.

ಈ ಸಂದರ್ಭದಲ್ಲಿ ಉತ್ತರ ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಕಾರ್ಯದರ್ಶಿ ಮಂಜುನಾಥ ಜಿ.ಗೊಂಡಬಾಳ, ಚಿತ್ರ ಸಾಹಿತಿ ಮಹಾಂತೇಶ ಮಲ್ಲನಗೌಡರ, ಚಿತ್ರ ನಿರ್ದೇಶಕ ಬಸವರಾಜ ಕೊಪ್ಪಳ, ಮುಖಂಡರಾದ ನಾಗರಾಜ ಮೇಟಿ ಇತರರು ಇದ್ದರು.

ನಂತರ ನಗರಸಭೆ ಮಾಜಿ ಅಧ್ಯಕ್ಷ ಅಮ್ಜದ್ ಪಟೇಲ್ ಅವರ ನೇತೃತ್ವದಲ್ಲಿ ನೂರಾರು ಜನರು ಚಲನಚಿತ್ರ ವೀಕ್ಷಿಸಿದರು. ಕಲ್ಟ್ ಚಿತ್ರ ಯುವ ನಟ ಜೈದ್ ಖಾನ್ ಅವರ ಎರಡನೇ ಚಿತ್ರವಾಗಿದ್ದು, ಚಿತ್ರದಲ್ಲಿ ಖ್ಯಾತ ನಟಿ, ಡಿಂಪಲ್ ಕ್ವೀನ್ ರಚಿತಾ ರಾಮ್ ವಿಶೇಷ ಪಾತ್ರದಲ್ಲಿ ನಟಿಸಿದ್ದು, ಮಲೈಕಾ ನಾಯಕಿಯಾಗಿ ನಟಿಸಿದ್ದಾರೆ.

## ಸೇತುವೆ, ಆಣೆಕಟ್ಟು ನಿರ್ಮಾಣ ಕಾಮಗಾರಿಯ ಭೂಮಿಪೂಜೆ ನೆರವೇರಿಸಿದ ಶಾಸಕ ಸಿ.ಸಿ. ಪಾಟೀಲ

# ಸೇತುವೆ ನಿರ್ಮಾಣ ಕಾಮಗಾರಿ ಗುಣಮಟ್ಟದ್ದಾಗಿರಲಿ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ರೈತರು ಮತ್ತು ವಾಹನಗಳ ಸಂಚಾರಕ್ಕೆ ತೊಂದರೆಯಾಗಿದ್ದ ಎರಡು ಗ್ರಾಮಗಳಿಗೆ ಹೋಗಲು ಸೇತುವೆ ನಿರ್ಮಾಣವು ಅವಶ್ಯವಿದೆ ಎಂಬುದು ಈ ಭಾಗದ ರೈತರ ಬೇಡಿಕೆಯಾಗಿತ್ತು. ಈ ದಿಸೆಯಲ್ಲಿ ಅವಶ್ಯಕ ಅನುದಾನವನ್ನು ಬಿಡುಗಡೆ ಮಾಡಿದ್ದು, ಗುತ್ತಿಗೆದಾರರು ಸುಸಜ್ಜಿತವಾದ ಕಾಮಗಾರಿಯನ್ನು ಮಾಡಬೇಕು ಎಂದು ಮಾಜಿ ಸಚಿವ, ಶಾಸಕ ಸಿ.ಸಿ. ಪಾಟೀಲ ಹೇಳಿದರು.

ಇಲ್ಲಿಯ ಕದಾಂಪೂರ ರಸ್ತೆ ಮತ್ತು ಚುರ್ಚಿಹಾಳ ರಸ್ತೆಯಲ್ಲಿ ಸೇತುವೆ ಮತ್ತು ಆಣೆಕಟ್ಟು ನಿರ್ಮಾಣ ಕಾಮಗಾರಿಯ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು.

ಕದಾಂಪೂರ ರಸ್ತೆಯಲ್ಲಿ ಸೇತುವೆ ನಿರ್ಮಾಣಕ್ಕಾಗಿ ಲೋಕೋಪಯೋಗಿ ಇಲಾಖೆಯ 1.50 ಕೋಟಿ ರೂ, ಚುರ್ಚಿಹಾಳ ರಸ್ತೆಯಲ್ಲಿ ಸೇತುವೆ ಮತ್ತು ಆಣೆಕಟ್ಟು ನಿರ್ಮಾಣಕ್ಕಾಗಿ 2.50 ಕೋಟಿ ರೂ ವೆಚ್ಚದಲ್ಲಿ ಕಾಮಗಾರಿಯನ್ನು ಹಮ್ಮಿಕೊಳ್ಳಲಾಗಿದ್ದು, ಉತ್ತಮ ಗುಣಮಟ್ಟದ ಕಾಮಗಾರಿಯಾಗಬೇಕೆಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.



ಲಕ್ಕುಂಡಿ ಅಭಿವೃದ್ಧಿ ಪ್ರಾಧಿಕಾರವು ಗ್ರಾಮದಲ್ಲಿ ನಡೆಸುತ್ತಿರುವ ಉತ್ಖನನ ಕಾರ್ಯಕ್ಕೆ ಗ್ರಾಮಸ್ಥರ ಸಲಹೆಗಳನ್ನು ಪಡೆದುಕೊಳ್ಳಬೇಕು. ಉತ್ಖನನದಿಂದ ಗ್ರಾಮಸ್ಥರಿಗೆ ತೊಂದರೆಯಾಗದಂತೆ ಎಲ್ಲರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಉತ್ಖನನ ಕಾರ್ಯ ನಡೆಸಬೇಕು. ಈ ದಿಸೆಯಲ್ಲಿ ಗ್ರಾಮಸ್ಥರ ಸಹಕಾರಕ್ಕಾಗಿ ದಿನಾಂಕ ನಿಗದಿ ಮಾಡಿ ಸಚಿವರ ಸಮ್ಮುಖದಲ್ಲಿ ಗ್ರಾಮ ಸಭೆಯನ್ನು ಕರೆದು ಲಕ್ಕುಂಡಿಯ ಗತ ವೈಭವವನ್ನು ಜಗತ್ತಿಗೆ ತೋರಿಸುವ ಕಾರ್ಯ ಮಾಡಬೇಕೆಂದು ಸಲಹೆ ನೀಡಿದರು.

ಕಳೆದ ಎರಡು ವರ್ಷಗಳ ಹಿಂದೆ ನಮ್ಮ ಸರಕಾರವು ಅದ್ದೂರಿಯಾಗಿ ಲಕ್ಕುಂಡಿ ಉತ್ಸವವನ್ನು ನಡೆಸಿದ್ದು, ಈ ವರ್ಷವೂ ಸಹ ಲಕ್ಕುಂಡಿ ಉತ್ಸವವನ್ನು ಆಚರಿಸಲು ಸರಕಾರಕ್ಕೆ ಪ್ರಸ್ತಾವನೆಯನ್ನು ಕಳಿಸಲಾಗುವುದು. ಲಕ್ಕುಂಡಿ ಅಭಿವೃದ್ಧಿ ಮತ್ತು ಉತ್ಸವ ಆಚರಣೆ ಕುರಿತು ಈಗ ನಡೆಯುತ್ತಿರುವ ಅಧಿವೇಶನದಲ್ಲಿ ಚರ್ಚೆ ಮಾಡಲು ಸಚಿವ ಎಚ್.ಕೆ. ಪಾಟೀಲರು ನನ್ನೊಂದಿಗೆ ಚರ್ಚಿಸಿದ್ದಾರೆ ಎಂದು ತಿಳಿಸಿದರು.

ಸರಕಾರಕ್ಕೆ ನಿಧಿಯನ್ನು ನೀಡಿದ ಪ್ರಜ್ವಲ್ ರಿತ್ತಿ ಕುಟುಂಬಕ್ಕೆ ಗ್ರಾ.ಪಂ ನಿವೇಶನವನ್ನು ನೀಡಿದ್ದು, ಅಧಿಕೃತ ದಾಖಲೆ ಪತ್ರಗಳನ್ನು ಒದಗಿಸಿದ ನಂತರ ವೈಯಕ್ತಿವಾಗಿ ಆ ಕುಟುಂಬಕ್ಕೆ ಸಹಾಯ ಮಾಡುವುದಾಗಿ ಭರವಸೆ ನೀಡಿದರು. ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ ಮಾತನಾಡಿ, ಸಚಿವ ಎಚ್.ಕೆ. ಪಾಟೀಲ ಮತ್ತು ಶಾಸಕ ಸಿ.ಸಿ. ಪಾಟೀಲರು ಕಾಳಜಿ ವಹಿಸಿ ಎರಡು ಸೇತುವೆ ನಿರ್ಮಾಣಕ್ಕೆ ಅನುದಾನ ಬಿಡುಗಡೆ ಮಾಡಿದ್ದು ಸ್ವಾಗತಾರ್ಹ. ಈ ದಿಸೆಯಲ್ಲಿ ಗ್ರಾಮದ ಮೂರು ಭಾಗದಲ್ಲಿ ಚರಂಡಿ ನೀರು ಹರಿದು ಹೋಗಲು ಸೂಕ್ತ ವ್ಯವಸ್ಥೆ ಕಲ್ಪಿಸಲು ಅನುದಾನ ಒದಗಿಸಬೇಕು ಎಂದು ವಿನಂತಿಸಿಕೊಂಡರು.

ಲಕ್ಕುಂಡಿ ಅಭಿವೃದ್ಧಿ ಪ್ರಾಧಿಕಾರದ ರಾಜ್ಯ ಸದಸ್ಯ ಸಿದ್ದಲಿಂಗೇಶ್ವರ ಪಾಟೀಲ ಮಾತನಾಡಿ, ಜ್ಯಾತ್ಯಾತೀತ ಮತ್ತು ಪಕ್ಷಾತೀತವಾಗಿ ಲಕ್ಕುಂಡಿ ಅಭಿವೃದ್ಧಿ ಮಾಡಲು ಶ್ರಮಿಸಲಾಗುವುದು. ಶಾಸಕರು ಪ್ರೋತ್ಸಾಹ ಮತ್ತು ಸಹಕಾರ ನೀಡಬೇಕು ಎಂದು ವಿನಂತಿಸಿಕೊಂಡರು.

ಬಿ.ಜೆ.ಪಿ ಹಿರಿಯ ಮುಖಂಡ, ಮಾಜಿ ಯೋಧ ದತ್ತಾತ್ರೇಯ ಜೋಶಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಜಿ.ಪಂ ಮಾಜಿ ಸದಸ್ಯ ಎಸ್.ಬಿ. ಕಲಕೇರಿ, ವಸಂತ ಮೇಟಿ, ಗ್ರಾ.ಪಂ ಸದಸ್ಯರಾದ ರುದ್ರಪ್ಪ ಮುಸ್ಕಿನಭಾವಿ, ಪೀರಸಾಬ ನದಾಫ್, ವಿರೂಪಾಕ್ಷಿ ಬೆಟಗೇರಿ, ಪ್ರೇಮಾ ಮಟ್ಟಿ, ತಾ.ಪಂ ಇ.ಓ ಮಲ್ಲಯ್ಯ ಕೊರವನವರ, ಪಿ.ಡಿ.ಓ ಅಮೀರನಾಯಕ ಇದ್ದರು. ಪ್ರಕಾಶ ಅರಹುಣಸಿ ಸ್ವಾಗತಿಸಿದರು, ವೆಂಕಟೇಶ ದೊಂಗಡೆ ನಿರೂಪಿಸಿದರು. ಮಹಮ್ಮದ್‌ರಫೀಕ ಹುಬ್ಬಳ್ಳಿ ವಂದಿಸಿದರು.

> ಲಕ್ಕುಂಡಿ ಅಭಿವೃದ್ಧಿ ಪ್ರಾಧಿಕಾರವು ನಡೆಸುತ್ತಿರುವ ಉತ್ಖನನ ಕಾರ್ಯವು ಗ್ರಾಮಸ್ಥರನ್ನು ವಿಶ್ವಾಸಕ್ಕೆ ಪಡೆಯದೇ ನಡೆಸುತ್ತಿದ್ದು, ಗ್ರಾಮ ಸಭೆ ಕರೆದು ಅಭಿಪ್ರಾಯ ಪಡೆಯಬೇಕು.
> – ಮಹೇಶ ಮುಸ್ಕಿನಬಾವಿ.
> ತಾ.ಪಂ ಮಾಜಿ ಸದಸ್ಯ.

> ಲಕ್ಕುಂಡಿಯು ವಿಶ್ವ ಪರಂಪರೆ ಪಟ್ಟಿಗೆ ಸೇರಬೇಕೆನ್ನುವ ನಿಟ್ಟಿನಲ್ಲಿ 2018ರಲ್ಲಿ ಲಕ್ಕುಂಡಿ ಅಭಿವೃದ್ಧಿ ಪ್ರಾಧಿಕಾರವು ರಚನೆಯಾಯಿತು. 2020ರಲ್ಲಿ ಶಾಸಕ ಸಿ.ಸಿ. ಪಾಟೀಲರ ನೇತೃತ್ವದಲ್ಲಿ ಅಧಿಸೂಚನೆಯಾಗಿದ್ದು, ಶಾಸಕರ ಸೂಚನೆಯಂತೆ ಗ್ರಾಮ ಸಭೆ ಕರೆಯಲಾಗುವುದು.
> – ಶರಣು ಗೋಗೇರಿ.
> ಆಯುಕ್ತರು, ಲಕ್ಕುಂಡಿ ಅಭಿವೃದ್ಧಿ ಪ್ರಾಧಿಕಾರ.

# ನಿಜಶರಣ ಅಂಬಿಗರ ಚೌಡಯ್ಯ ಜಯಂತಿ ಆಚರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಶ್ರೀ ಉಡಚಮ್ಮದೇವಿ ಗುಡಿ ಓಣಿಯ ಶ್ರೀ ನಿಜಶರಣ ಅಂಬಿಗರ ಚೌಡಯ್ಯ ದೇವಸ್ಥಾನದ ಆವರಣದಲ್ಲಿ ಶ್ರೀ ನಿಜಶರಣ ಅಂಬಿಗರ ಚೌಡಯ್ಯನವರ 906ನೇ ಜಯಂತಿ ಸಮಾರಂಭವನ್ನು ಆಯೋಜಿಸಲಾಗಿತ್ತು.




ಈ ಸಂದರ್ಭದಲ್ಲಿ ವಾಸುದೇವ ಎಸ್.ಲಕ್ಷ್ಮೇಶ್ವರ, ಮಂಜುನಾಥ ಸುಣಗಾರ, ಪ್ರಕಾಶ ಪೂಜಾರ, ರವಿಕುಮಾರ ಸವಣೂರ, ಕುಮಾರ ಪೂಜಾರ, ಅರ್ಜುನ ಪೂಜಾರ, ಶ್ರೀಧರ ಸುಣಗಾರ, ನೀಲಕಂಠ ಗುಡಿಸಾಗರ, ಚಾಮರಾಜ ಪೂಜಾರ, ಶ್ರೀಕಾಂತ ಪೂಜಾರ, ಪರಶುರಾಮ ಹಿತ್ತಲಮನಿ, ಉಮಣ್ಣ ಪೂಜಾರ, ರಾಮಣ್ಣ ಲಕ್ಷ್ಮೇಶ್ವರ, ಪ್ರವೀಣ ಲಕ್ಕಣ್ಣವರ, ಸಂಜು ಪೂಜಾರ, ಮಂಜುನಾಥ ಪೂಜಾರ, ಪ್ರಶಾಂತ ಲಕ್ಕಣ್ಣವರ, ಪ್ರಸನ್ನ ಲಕ್ಕಣ್ಣವರ, ಮಹೇಶ ಪೂಜಾರ, ಮಂಜುನಾಥ ಪೂಜಾರ, ಶ್ರೀಕಾಂತ ಪೂಜಾರ, ಗೋಪಾಲ ಲಕ್ಷ್ಮೇಶ್ವರ, ಮಲ್ಲೇಶ ಲಕ್ಷ್ಮೇಶ್ವರ, ಶಿವಾನಂದ ಲಕ್ಷ್ಮೇಶ್ವರ, ಬಸವರಾಜ ಜಿಗಳೂರ, ಮಧುಸೂದನ ಪೂಜಾರ, ಪುಷ್ಪಾ ಪೂಜಾರ, ಲಕ್ಷ್ಮೀ ಪೂಜಾರ, ನಾಗವ್ವ ಜಿಗಳೂರ, ಪ್ರೇಮಾ ಲಕ್ಷ್ಮೇಶ್ವರ, ಪಾರವ್ವ ಪೂಜಾರ, ಅನ್ನಪೂರ್ಣ ಸವಣೂರ, ರತ್ನಾ ಲಕ್ಷ್ಮೇಶ್ವರ, ಲಕ್ಷ್ಮೀ ಲಕ್ಷ್ಮೇಶ್ವರ, ಲಕ್ಷ್ಮೀ ಪೂಜಾರ, ಚನ್ನಮ್ಮ ಪೂಜಾರ, ಮಹಾದೇವಿ ಹಿರೇಮಠ, ಶೋಭಾ ಬಾರಕೇರ, ಲಲಿತಾ ಲಕ್ಷ್ಮೇಶ್ವರ, ಸುಜಾತಾ ಸುಣಗಾರ, ರೇಣುಕಾ ಪೂಜಾರ, ಗೌರಮ್ಮ ಮರಿನಾಯಕರ, ಮಂಗಳಾ ಲಕ್ಕಣ್ಣವರ, ಲಕ್ಷ್ಮೀ ಪಾ.ಪೂಜಾರ, ಗೀತಾ ಶಿ.ಪೂಜಾರ, ಲಲಿತಾ ಪೂಜಾರ, ಸುವರ್ಣ ಪೂಜಾರ, ಕಮಲವ್ವ ಪೂಜಾರ, ಗಿರಿಜಾ ಪೂಜಾರ, ಶೋಭಾ ಹಿತ್ತಲಮನಿ, ಶರಣಮ್ಮ ಪೂಜಾರ, ಶಶಿಕಲಾ ಉ.ಪೂಜಾರ ಉಪಸ್ಥಿತರಿದ್ದರು.

# ಸವಿತಾ ಮಹರ್ಷಿ ಮಹಾನ್ ಯುಗ ಪುರುಷ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸವಿತಾ ಮಹರ್ಷಿಗಳು ಸಮಾಜದ ಶ್ರೇಷ್ಠತೆಗೆ ಶ್ರಮಿಸಿದ ಮಹಾನ್ ಯುಗ ಪುರುಷ ಎಂದು ಪ.ಪಂ ಪ್ರಭಾರಿ ಮುಖ್ಯಾಧಿಕಾರಿ ಮಲ್ಲೇಶ ಪಚ್ಚಿ ಹೇಳಿದರು.

ಸ್ಥಳೀಯ ಪ.ಪಂ ಸಭಾಭವನದಲ್ಲಿ ಭಾನುವಾರ ಹಮ್ಮಿಕೊಂಡಿದ್ದ ಸವಿತಾ ಮಹರ್ಷಿ ಜಯಂತಿ ನಿಮಿತ್ತ ಸವಿತಾ ಮಹರ್ಷಿ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಅವರು ಮಾತನಾಡಿದರು.

ಸವಿತಾ ಸಮಾಜ ಉತ್ತಮ ಕಾಯಕ ನಿಷ್ಠೆಯನ್ನು ಹೊಂದಿದೆ. ಅವರ ಕಾಯಕದಲ್ಲಿ ಪ್ರಾಮಾಣಿಕತೆ ಇದೆ. ಸಮಾಜದ ಯಾವುದೇ ರೀತಿಯ ಸಮಸ್ಯೆ ಇದ್ದರೂ ಸ್ಪಂದಿಸಿ ಪರಿಹರಿಸಲಾಗುವುದು. ಸಮಾಜದವರು ಸರ್ಕಾರದಿಂದ ಸಿಗುವ ಸೌಲಭ್ಯಗಳನ್ನು ಪಡೆದುಕೊಳ್ಳಬೇಕು. ಸಮಾಜಕ್ಕೆ



ಉತ್ತಮ ಸಂದೇಶ ನೀಡಿದ ಸವಿತಾ ಮಹರ್ಷಿಯ ತತ್ವಗಳನ್ನು ನಾವೆಲ್ಲರೂ ಪಾಲಿಸೋಣ ಎಂದರು.

ಈ ಸಂದರ್ಭದಲ್ಲಿ ಆರೀಫ್ ಮಿರ್ಜಾ, ರಮೇಶ ಹಲಗಿಯವರ, ಎ.ವಿ. ಮೆಣಸಗಿ, ರಕ್ಷತ ಎಲ್, ಶೇಖಪ್ಪ ಹೊನ್ನವಾಡ, ಶಂಕ್ರಪ್ಪ ದೊಡ್ಡಣ್ಣವರ, ನಿಲಪ್ಪ ಚಳ್ಳಮರದ, ಮಹಾದೇವಪ್ಪ ಮ್ಯಾಗೇರಿ, ನಿಂಗಪ್ಪ ಮಡಿವಾಳರ, ನಾಜೀಮಾ ಬೇಲೇರಿ, ಉದಯ ಮುದೇನಗುಡಿ ಸೇರಿದಂತೆ ಪ.ಪಂ ಸಿಬ್ಬಂದಿ ಇದ್ದರು.

# ಯೋಗಿ ವೇಮನ ಜಯಂತಿ ಆಚರಣೆ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ತಾಲೂಕಿನ ಖಾನಾಪೂರ ಗ್ರಾಮದಲ್ಲಿ ಮಹಾಯೋಗಿ, ದಾರ್ಶನಿಕ ಕವಿ, ಸಾಹಿತಿ ಯೋಗಿ ವೇಮನರ ಜಯಂತಿಯನ್ನು ಗ್ರಾಮದ ರೆಡ್ಡಿ ಸಮುದಾಯ ಸೇರಿದಂತೆ ಎಲ್ಲ ಹಿರಿಯರು ಮಹಾಸಾಧ್ವಿ ಹೇಮರೆಡ್ಡಿ ಮಲ್ಲಮ್ಮ ದೇವಸ್ಥಾನದಲ್ಲಿ ಅದ್ದೂರಿಯಾಗಿ ಆಚರಿಸಿದರು.



ಶರಣ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಎಂ.ಕೆ. ಲಮಾಣಿ ಉಪನ್ಯಾಸ ನೀಡಿ, ಯೋಗಿ ವೇಮನರು ಸಮಾಜದಲ್ಲಿ ಎಲ್ಲರೂ ಭ್ರಾತೃತ್ವದೊಂದಿಗೆ ಸೌಹಾರ್ದಯುತವಾಗಿ ಜೀವನವನ್ನು ನಡೆಸಬೇಕೆಂದು ತಮ್ಮ ಅನೇಕ ವಚನಗಳ ಮೂಲಕ ಹೇಳಿದ್ದಾರೆ. ಇವರ ಆದರ್ಶವನ್ನು ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಸನ್ಮಾರ್ಗದಲ್ಲಿ ನಡೆಯಬೇಕೆಂದು ಹೇಳಿದರು.

ಕಾರ್ಯಕ್ರಮದಲ್ಲಿ ಸಿದ್ದು ಹಲಸೂರ, ಅಜ್ಜನಗೌಡ ಪಾಟೀಲ, ಮಲ್ಲಿಕಾರ್ಜುನ ರೆಡ್ಡಿ, ಅಶೋಕ ಮಡಿವಾಳರ, ಬಸವರಾಜ ಹಲಸೂರ, ಪ್ರಕಾಶ ರೆಡ್ಡಿ ಹಾಗೂ ಗ್ರಾಮದ ಹಿರಿಯರು ಉಪಸ್ಥಿತರಿದ್ದರು.

## ಯುನೈಟೆಡ್ ಫೋರಂ ಆಫ್ ಬ್ಯಾಂಕ್ ಯೂನಿಯನ್ ವತಿಯಿಂದ

# ಜ. 27ರಂದು ಅಖಿಲ ಭಾರತ ಬ್ಯಾಂಕ್ ನೌಕರರ ಮುಷ್ಕರ




■ವಿಜಯಸಾಕ್ಷಿ ಸುದ್ದಿ, ಗದಗ

ಉದ್ಯೋಗಿಗಳ ಹಾಗೂ ಅಧಿಕಾರಿಗಳ 9 ಸಂಘಟನೆಗಳನ್ನು ಒಳಗೊಂಡಿರುವ ಯುನೈಟೆಡ್ ಫೋರಂ ಆಫ್ ಬ್ಯಾಂಕ್ ಯೂನಿಯನ್ ತಮ್ಮ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಜ. 27ರಂದು ದೇಶದಾದ್ಯಂತ ಬ್ಯಾಂಕ್ ನೌಕರರ ಮುಷ್ಕರವನ್ನು ಹಮ್ಮಿಕೊಳ್ಳಲು ನಿರ್ಧರಿಸಿದೆ. ಈ ಮುಷ್ಕರದಲ್ಲಿ ಸಾರ್ವಜನಿಕ ವಲಯದ ಬ್ಯಾಂಕುಗಳು, ಖಾಸಗಿ ವಲಯದ ಬ್ಯಾಂಕುಗಳು, ವಿದೇಶಿ ಬ್ಯಾಂಕುಗಳು, ಪ್ರಾದೇಶಿಕ ಗ್ರಾಮೀಣ ಬ್ಯಾಂಕುಗಳು, ಸಹಕಾರ ಬ್ಯಾಂಕುಗಳ ನೌಕರರು ಪಾಲ್ಗೊಳ್ಳಲಿದ್ದಾರೆ.

ಬ್ಯಾಂಕ್ ನೌಕರರ ಬೇಡಿಕೆಗಳಾದ ಬ್ಯಾಂಕಿಂಗ್ ಕ್ಷೇತ್ರದಲ್ಲಿ ವಾರಕ್ಕೆ 5 ದಿನಗಳ ಕೆಲಸ ವ್ಯವಸ್ಥೆ ಜಾರಿಗೆ ತರಲು ಸರ್ಕಾರದ ಅನುಮೋದನೆ ನೀಡಬೇಕು, ಪ್ರಸ್ತುತ ಬ್ಯಾಂಕುಗಳಿಗೆ ರಜೆ ಆಗಿರುವ 2ನೇ ಮತ್ತು 4ನೇ ಶನಿವಾರಗಳ ಹೊರತಾಗಿ ಉಳಿದ ಎಲ್ಲಾ ಶನಿವಾರಗಳನ್ನು ರಜೆ ಎಂದು ಘೋಷಿಸಬೇಕು ಇತ್ಯಾದಿ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಧರಣಿ ನಡೆಸಲಿದ್ದಾರೆ.

ಬ್ಯಾಂಕುಗಳಲ್ಲಿ ಈಗಾಗಲೇ 2ನೇ ಮತ್ತು 4ನೇ ಶನಿವಾರಗಳು ರಜೆಯಾಗಿರುವುದರಿಂದ, ಸೋಮವಾರದಿಂದ ಶುಕ್ರವಾರದವರೆಗೆ ಕೆಲಸದ ಸಮಯವನ್ನು ಹೆಚ್ಚಿಸಿ ಉಳಿದ ಶನಿವಾರಗಳನ್ನು ರಜೆ ಎಂದು ಘೋಷಿಸುವುದರಿಂದ ವಿವಿಧ ಪರ್ಯಾಯ ಡಿಜಿಟಲ್ ಬ್ಯಾಂಕಿಂಗ್ ಸೇವೆಗಳು ಲಭ್ಯವಿರುವ ಇಂದಿನ ಪರಿಸ್ಥಿತಿಯಲ್ಲಿ ಗ್ರಾಹಕರಿಗೆ ಯಾವುದೇ ದೊಡ್ಡ ಸಮಸ್ಯೆಯಾಗುವುದಿಲ್ಲ. ಬ್ಯಾಂಕ್ ಉದ್ಯೋಗಿಗಳು ಮತ್ತು ಅಧಿಕಾರಿಗಳು ತಮಗೆ ಮಾತ್ರ ಅನ್ಯಾಯವಾಗುತ್ತಿರುವುದರಿಂದ ತೀವ್ರ ಅಸಮಾಧಾನ ವ್ಯಕ್ತಪಡಿಸಿ ನಗರದ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಎಪಿಎಂಸಿ ಪ್ರಾದೇಶಿಕ ಕಚೇರಿಯ ಮುಂದೆ ಮತ ಪ್ರದರ್ಶನದಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸಿದರು.

ಈ ಮತ ಪ್ರದರ್ಶನದಲ್ಲಿ ಹನುಮೇಶ್ ಎಂ.ಗಂಗರಾಹುತರ, ಅಮರೇಶ್ವರ, ಶಿವಾನಂದ್, ಪ್ರೇಮ್ ಕುಮಾರ, ಸೂರ್ಯಪ್ರಕಾಶ್, ದೀಪ ಮಾಲಾ, ನೇಹಾ, ಸುಧಾರಾಣಿ, ಪ್ರೀತಿ, ಲೋಕೇಶ್, ಹರೀಶ, ದೀಪಕ, ವಿನೋದ, ವಿಜಯ, ಸಿದ್ದಲಿಂಗೇಶ, ರಾಜು ಸಿಂಗಾಡಿ ಮುಂತಾದವರು ಪಾಲ್ಗೊಂಡಿದ್ದರು.

> ಹಣಕಾಸು ಕ್ಷೇತ್ರದಲ್ಲಿ ಈಗಾಗಲೇ ಆರ್.ಬಿ.ಐ, ಎಲ್.ಐ.ಸಿ ಮತ್ತು ಜಿ.ಐ.ಸಿಗಳಲ್ಲಿ ವಾರಕ್ಕೆ 5 ದಿನಗಳ ಕೆಲಸ ವ್ಯವಸ್ಥೆ ಜಾರಿಗೆ ಬಂದಿದೆ. ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಎಲ್ಲಾ ಕಚೇರಿಗಳು ಸೋಮವಾರದಿಂದ ಶುಕ್ರವಾರದವರೆಗೆ ಮಾತ್ರ ಕಾರ್ಯನಿರ್ವಹಿಸುತ್ತವೆ. ಷೇರುಪೇಟೆಗಳು ಸಹ ಸೋಮವಾರದಿಂದ ಶುಕ್ರವಾರದವರೆಗೆ ಮಾತ್ರ ಕಾರ್ಯನಿರ್ವಹಿಸುತ್ತವೆ. ಹಣ ಮಾರುಕಟ್ಟೆ ವಿದೇಶಿ ವಿನಿಮಯ ವ್ಯವಹಾರಗಳು ಶನಿವಾರ ಹಾಗೂ ಭಾನುವಾರ ಮುಚ್ಚಿರುತ್ತವೆ ಎಂದು ಯೂನಿಯನ್ ಮುಖ್ಯಸ್ಥರು ಅಭಿಪ್ರಾಯ ವ್ಯಕ್ತಪಡಿಸಿದರು.

# ಕ್ರೀಡೆ ಉತ್ತಮ ಆರೋಗ್ಯಕ್ಕೆ ದಾರಿ



■ವಿಜಯಸಾಕ್ಷಿ ಸುದ್ದಿ, ಡಂಬಳ

ಗ್ರಾಮೀಣ ಭಾಗದ ಕ್ರೀಡಾಪಟುಗಳು ಕೇಂದ್ರ ಮತ್ತು ರಾಜ್ಯ ಸರ್ಕಾರದ ಕ್ರೀಡಾ ಇಲಾಖೆಯಿಂದ ಬರುವ ಅನುದಾನವನ್ನು ಸರಿಯಾಗಿ ಬಳಸಿಕೊಂಡು ಉತ್ತಮ ಕ್ರೀಡಾಪಟುಗಳಾಗಬೇಕು ಎಂದು ಬಿಜೆಪಿ ಮುಖಂಡ ಆನಂದಗೌಡ ಎಚ್.ಪಾಟೀಲ್ ಹೇಳಿದರು.

ಡಂಬಳ ಗ್ರಾಮದ ಎಪಿಎಮ್‌ಸಿ ಆವರಣದಲ್ಲಿ ಶ್ರೀ ಜಗದ್ಗುರು ತೋಂಟದಾರ್ಯ 286ನೇ ಜಾತ್ರಾ ಮಹೋತ್ಸವದ ಪ್ರಯುಕ್ತ ಡಾ. ಬಿ.ಆರ್. ಅಂಬೇಡ್ಕರ್ ಯುವಕ ಮಂಡಳ ಮತ್ತು ಪ್ರೊ. ಬಿ.ಕೃಷ್ಣಪ್ಪ ಸ್ಥಾಪಿತ ಕರ್ನಾಟಕ ದಲಿತ ಸಂಘರ್ಷ ಸಮಿತಿ ಇವರ ಸಂಯುಕ್ತ ಆಶ್ರಯದಲ್ಲಿ ಮುಕ್ತ ಹಾರ್ಡ್ ಟೆನ್ನಿಸ್‌ಬಾಲ್ ಕ್ರಿಕೆಟ್ ಪಂದ್ಯಾವಳಿ ಉದ್ಘಾಟಿಸಿ ಅವರು ಮಾತನಾಡಿದರು.

ವಿರೋಧ ಪಕ್ಷದ ಮುಖಂಡ ಹೇಮಗಿರೀಶ ಹಾವಿನಾಳ ಮಾತನಾಡಿ, ಜೀವನದಲ್ಲಿ ಯುವಕರು ದೈಹಿಕವಾಗಿ, ಮಾನಸಿಕವಾಗಿ ಗಟ್ಟಿಯಾಗಿರಬೇಕಾದರೆ ಕ್ರೀಡೆಗೆ ಆದ್ಯತೆ ನೀಡಿ. ಕ್ರಿಕೆಟ್ ದೇಶದ ಮತ್ತು ವಿಶ್ವದ ಪ್ರಸಿದ್ಧ ಆಟವಾಗಿದೆ. ಗ್ರಾಮೀಣ ಹಳೆ ಕ್ರೀಡಾಪಟುಗಳು ಪ್ರಾಥಮಿಕ, ಹೈಸ್ಕೂಲ್, ಕಾಲೇಜಿನ ವಿದ್ಯಾರ್ಥಿಗಳು ಕ್ರೀಡೆಯಲ್ಲಿ ಪ್ರಾವೀಣ್ಯತೆ ಹೊಂದಿದವರಿಗೆ ಪ್ರೋತ್ಸಾಹ ನೀಡಿದರೆ ಕ್ರೀಡಾಕೂಟಗಳಲ್ಲಿ ಉತ್ತಮ ಸಾಧನೆ ಮಾಡಲಿದ್ದಾರೆ ಎಂದು ಹೇಳಿದರು.

ಡಂಬಳ ಮಠದ ವ್ಯವಸ್ಥಾಪಕ ಜಿ.ವಿ. ಹಿರೇಮಠ ಮಾತನಾಡಿ, ನಮ್ಮ ಸ್ಥಳೀಯ ಆಟಗಳಿಗೆ ಆದ್ಯತೆ ನೀಡಬೇಕು. ಮೊಬೈಲ್‌ನಿಂದಾಗಿ ದೈಹಿಕ ಆರೋಗ್ಯ ಹಾಳಾಗುತ್ತಿದೆ. ಇದರಿಂದ ಹೊರಬರಬೇಕು ಎಂದು ಹೇಳಿದರು.

ಗೋಣಿಬಸಪ್ಪ ಕೊರ್ಲಹಳ್ಳಿ, ಡಿಎಸ್‌ಎಸ್ ಸಂಚಾಲಕ ಸೋಮಣ್ಣ ಹೈತಾಪುರ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಗದಗ ಜಿಲ್ಲಾ ಡಿಎಸ್‌ಎಸ್ ಸಂಚಾಲಕ ದುರಗಪ್ಪ ಹರಿಜನ, ಮಲ್ಲಪ್ಪ ಮಠದ, ಕುಬೇರಪ್ಪ ಕೆ.ಬಂಡಿ, ಮಹೇಶ ಗುಡ್ಡದ, ಬಂದುಸಾಬ ಜಲಾಲನವರ, ಕೆ.ಎನ್. ದೊಡ್ಡಮನಿ, ಪ್ರಕಾಶ ಕೋತಂಬ್ರಿ, ನಿಂಗಪ್ಪ ಮಾದರ, ದುರಗಪ್ಪ ಮಾದರ, ಹಾಲಪ್ಪ ತಾಮ್ರಗುಂಡಿ, ಮರಿಯಪ್ಪ ಸಿದ್ದಣ್ಣವರ, ಯಮನೂರ ದೊಡ್ಡಮನಿ, ದೇವಪ್ಪ ತಳಗೇರಿ, ಮುತ್ತಪ್ಪ ತಳಗೇರಿ, ದೇವಪ್ಪ ತಳಗೇರಿ, ಮುತ್ತಪ್ಪ ದೊಡ್ಡಮನಿ, ವೆಂಕಪ್ಪ ತಳಗೇರಿ, ದುರಗಪ್ಪ ಹರಿಜನ ಪಾಲ್ಗೊಂಡಿದ್ದರು. ಲಕ್ಷ್ಮಣ ದೊಡ್ಡಮನಿ ನಿರೂಪಿಸಿ ವಂದಿಸಿದರು.

## ಚುನಾವಣಾ ಆಯೋಗ ನಿರಂತರ ಒತ್ತಡ ಎದುರಿಸುತ್ತಿದೆ, ಅದರ ಸ್ವಾತಂತ್ರ್ಯ ರಕ್ಷಿಸಬೇಕಿದೆ : ಮಲ್ಲಿಕಾರ್ಜುನ ಖರ್ಗೆ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು



ಇತ್ತೀಚಿನ ದಿನಗಳಲ್ಲಿ, ಚುನಾವಣಾ ಆಯೋಗದಂತಹ ಸಂಸ್ಥೆಗಳು ನಿರಂತರ ಒತ್ತಡವನ್ನು ಎದುರಿಸುತ್ತಿವೆ. ಆದ್ದರಿಂದ ಪ್ರಜಾಪ್ರಭುತ್ವವು ಕೇವಲ ಉಳಿಯುವುದಲ್ಲದೆ, ನಿಜವಾಗಿಯೂ ಅಭಿವೃದ್ಧಿ ಹೊಂದುವಂತೆ ಅವುಗಳ ಸ್ವಾತಂತ್ರ್ಯವನ್ನು ರಕ್ಷಿಸುವುದು 'ನಮ್ಮ ಜವಾಬ್ದಾರಿ' ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಭಾನುವಾರ (ಜ.25) ಹೇಳಿದ್ದಾರೆ.

ರಾಷ್ಟ್ರೀಯ ಮತದಾರರ ದಿನದ ಹಿನ್ನೆಲೆ ಸಾಮಾಜಿಕ ಜಾಲತಾಣಗಳಲ್ಲಿ ಪೋಸ್ಟ್ ಹಾಕಿರುವ ಅವರು, "ಮತಗಳ್ಳತನ ಮತ್ತು ಯೋಜಿತವಲ್ಲದ ಎಸ್‌ಐಆರ್ ಮೂಲಕ ಮತದಾನದ ಹಕ್ಕನ್ನು ಕಸಿದುಕೊಳ್ಳುವುದು ಬಹುಕಾಲದಿಂದ ಪಾಲಿಸಿಕೊಂಡು ಬಂದ ಭಾರತದ ಪ್ರಜಾಪ್ರಭುತ್ವಕ್ಕೆ ಕಳಂಕ ಎಂದಿದ್ದಾರೆ.

"ಒಂದು ರಾಷ್ಟ್ರದ ಭವಿಷ್ಯವು ಅದರ ಜನರದ್ದೇ ಆಗಿದೆ, ನಮ್ಮ ಸಾಮೂಹಿಕ ಧ್ವನಿ ನಮ್ಮ ಭವಿಷ್ಯವನ್ನು ರೂಪಿಸಬಹುದು ಎಂಬುದನ್ನು ನಮಗೆ ನೆನಪಿಸುವ ದಿನವೇ ರಾಷ್ಟ್ರೀಯ ಮತದಾರರ ದಿನ" ಎಂದು ಮಲ್ಲಿಕಾರ್ಜುನ ಖರ್ಗೆ ಹೇಳಿದ್ದಾರೆ.

"ಭಾರತದ ಜನರು ಸ್ವತಂತ್ರ, ನ್ಯಾಯಯುತ ಮತ್ತು ನಿರ್ಭೀತ ಚುನಾವಣೆಗಳಿಗೆ ಅರ್ಹರು. ಅಲ್ಲಿ ಶುದ್ಧ ಮತದಾರರ ಪಟ್ಟಿ ಮತ್ತು ಸಮಾನ ಸ್ಪರ್ಧೆಯ ಕ್ಷೇತ್ರ ಮುಖ್ಯ ಅಗತ್ಯವಾಗಿರಬೇಕು" ಎಂದಿದ್ದಾರೆ.

ಭಾರತ ಗಣರಾಜ್ಯವಾಗುವ ಒಂದು ದಿನ ಮೊದಲು, ಅಂದರೆ ಜನವರಿ 25, 1950ರಂದು ಚುನಾವಣಾ ಆಯೋಗವನ್ನು ಸ್ಥಾಪಿಸಲಾಯಿತು. ಕಳೆದ 16 ವರ್ಷಗಳಿಂದ ಈ ದಿನವನ್ನು ರಾಷ್ಟ್ರೀಯ ಮತದಾರರ ದಿನವನ್ನಾಗಿ ಆಚರಿಸಲಾಗುತ್ತಿದೆ.

### 16ನೇ ರಾಷ್ಟ್ರೀಯ ಮತದಾರರ ದಿನಾಚರಣೆ ನಿಮಿತ್ತ ಸ್ವೀಪ್ ಜಾಥಾ

# ಪ್ರತಿಯೊಬ್ಬರೂ ಮತದಾನದ ಹಕ್ಕು ಚಲಾಯಿಸಿ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ




ಮತದಾನದ ಪ್ರಾಮುಖ್ಯತೆ ಮತ್ತು ಪ್ರಜೆಗಳ ಮೇಲಿರುವ ಹೊಣೆಗಾರಿಕೆ ಕುರಿತು ಜಾಗೃತಿ ಮೂಡಿಸಲು ರಾಷ್ಟ್ರೀಯ ಮತದಾರರ ದಿನ ಆಚರಿಸಲಾಗುತ್ತಿದೆ ಎಂದು ದಿವಾಣಿ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳಾದ ಸತೀಶ್ ಎಂ ಹೇಳಿದರು.

ಪಟ್ಟಣದ ದೇವರಾಜ ಅರಸು ಭವನ ಆಡಿಟೋರಿಯಂ ಹಾಲ್‌ನಲ್ಲಿ ತಾಲೂಕು ಆಡಳಿತ, ತಾಲೂಕು ಸ್ವೀಪ್ ಸಮಿತಿ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ರಾಷ್ಟ್ರೀಯ ಮತದಾರರ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

2026ರ ರಾಷ್ಟ್ರೀಯ ಮತದಾರರ ದಿನದ ಘೋಷವಾಕ್ಯ "ನನ್ನ ಭಾರತ, ನನ್ನ ಮತ–ಪ್ರಜಾಪ್ರಭುತ್ವದ ಹೃದಯದಲ್ಲಿರುವ ಭಾರತೀಯ ನಾಗರಿಕ" (My India, My Vote - Citizen at the Heart of Indian Democracy) ಆಗಿದೆ. ದೇಶದ ಮತದಾರರಿಗೆ ಸಮರ್ಪಿತವಾಗಿರುವ ರಾಷ್ಟ್ರೀಯ ಮತದಾರರ ದಿನವನ್ನು ಆಚರಿಸುವುದರ ಮೂಲಕ ಅರ್ಹ ನಾಗರಿಕರನ್ನು ಮತದಾರರ ಪಟ್ಟಿಯಲ್ಲಿ ನೋಂದಣಿ ಮಾಡಿಕೊಳ್ಳಲು ಪ್ರೋತ್ಸಾಹಿಸಲಾಗುತ್ತದೆ. ಈ ಕಾರ್ಯಕ್ರಮದಲ್ಲಿ ಹೊಸ ಮತದಾರರನ್ನು ಅಭಿನಂದಿಸಿ ಮತದಾರರ ಗುರುತಿನ ಚೀಟಿ (EPIC Card)ಗಳನ್ನು ವಿತರಿಸಲಾಗುವುದು. ಅದರ ಅಂಗವಾಗಿ ಯುವಕರು, ವಿಶೇಷಚೇತನರು, ಮಹಿಳೆಯರು, ತೃತೀಯ ಲಿಂಗಿಗಳು ಹಾಗೂ ವಿಶೇಷವಾಗಿ ದುರ್ಬಲ ಬುಡಕಟ್ಟು ಜನಾಂಗದ ಮತದಾರರಿಗೆ ಮತದಾರರ ಗುರುತಿನ ಚೀಟಿಗಳನ್ನು ಸಾಂಕೇತಿಕವಾಗಿ ವಿತರಿಸಲಾಗುವುದು ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಿರಹಟ್ಟಿ ತಹಸೀಲ್ದಾರ ಕೆ. ರಾಘವೇಂದ್ರ ರಾವು ಸಮಾರಂಭದಲ್ಲಿ ಭಾಗವಹಿದ್ದ ಎಲ್ಲರಿಗೂ ಮತದಾರರ ಪ್ರತಿಜ್ಞಾ ವಿಧಿಯನ್ನು ಬೋಧಿಸಿದರು

ಚುನಾವಣಾ ಆಯೋಗದ ನಿರ್ದೇಶನದಂತೆ, ಮುಕ್ತ ಮತ್ತು ನ್ಯಾಯಸಮ್ಮತ ಚುನಾವಣೆಗಾಗಿ ಪ್ರತಿಯೊಬ್ಬರೂ ಮತದಾನದ ಹಕ್ಕು ಚಲಾಯಿಸಬೇಕು ಎಂಬ ಸಂದೇಶದೊಂದಿಗೆ ಕಾರ್ಯಕ್ರಮ ಮುಕ್ತಾಯವಾಯಿತು.

ಕಾರ್ಯಕ್ರಮದಲ್ಲಿ ಪಿಎಸ್‌ಐ ಈರಪ್ಪ ರಿತ್ತಿ, ಹನುಮರಡ್ಡಿ ವಂದ್ಲಿ, ತಾಲೂಕು ಮಟ್ಟದ ಎಲ್ಲ ಅಧಿಕಾರಿಗಳು ಮತ್ತು ಸಿಬ್ಬಂದಿಗಳು, ತಾಲೂಕಿನ ಆಶಾ ಕಾರ್ಯಕರ್ತರು, ಅಂಗನವಾಡಿ ಮೇಲ್ವಿಚಾರಕರು ಮತ್ತು ಸಹಾಯಕರು, NRLM MBK ಹಾಗೂ LCRP ಸೇರಿದಂತೆ ತಾಲೂಕಿನ ಶಾಲಾ–ಕಾಲೇಜು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ತಾಲೂಕು ಸ್ವೀಪ್ ಸಮಿತಿ ಅಧ್ಯಕ್ಷ ಹಾಗೂ ತಾ.ಪಂ ಕಾರ್ಯ ನಿರ್ವಾಹಕ ಅಧಿಕಾರಿಗಳಾದ ರಾಮಣ್ಣ ದೊಡ್ಡಮನಿ ಮಾತನಾಡಿ, ಪ್ರತಿ ಪ್ರಜೆಯೂ ತನ್ನನ್ನು ಆಳುವ ಪ್ರತಿನಿಧಿಯನ್ನು ಆಯ್ಕೆ ಮಾಡಲು ಇರುವ ವ್ಯವಸ್ಥೆಯೇ ಮತದಾನ. ಮತದಾನ ದೇಶದ ಪ್ರಜೆಗಳ ಪ್ರಮುಖ ಹಕ್ಕು. ತಮ್ಮ ಒಳಿತನ್ನು ಬಯಸುವ ಜನಪರ ನಾಯಕನನ್ನು ತಾವೇ ಆಯ್ಕೆ ಮಾಡಿ ಕಳುಹಿಸಲು ಮತದಾನ ಎಂಬ ಪ್ರಕ್ರಿಯೆ ಬೇಕು. ದೇಶಕ್ಕೆ ಒಳಿತು ಮಾಡುವ ನಾಯಕನನ್ನು ಚುನಾಯಿಸುವುದು ಪ್ರತಿಯೊಬ್ಬ ಪ್ರಜೆಯ ಜವಾಬ್ದಾರಿ ಎಂದರು.

## ಗ್ಯಾರೇಜ್ ಒಳಗೆ ಮಲಗಿದ್ದ ಹಿಂದೂ ಯುವಕ ಜೀವಂತ ದಹನ

■ವಿಜಯಸಾಕ್ಷಿ ಸುದ್ದಿ, ಬಾಂಗ್ಲಾದೇಶ

ಬಾಂಗ್ಲಾದೇಶದ ರಾಜಧಾನಿ ಢಾಕಾದಿಂದ ಸುಮಾರು 50 ಕಿ.ಮೀ ದೂರದಲ್ಲಿರುವ ನರಸಿಂಗ್ದಿಯಲ್ಲಿ ಗ್ಯಾರೇಜ್ ಒಳಗೆ ಮಲಗಿದ್ದ 23 ವರ್ಷದ ಹಿಂದೂ ವ್ಯಕ್ತಿ ಜೀವಂತವಾಗಿ ದಹನಗೊಂಡ ಘಟನೆ ನಡೆದಿದ್ದು, ಈ ಘಟನೆಯು ರಾಷ್ಟ್ರೀಯ ಚುನಾವಣೆಗೂ ಮುನ್ನ ಬಾಂಗ್ಲಾದೇಶದ ಅಲ್ಪಸಂಖ್ಯಾತ ಸಮುದಾಯಗಳ ಸುರಕ್ಷತೆಯ ಬಗ್ಗೆ ಮತ್ತೆ ಕಳವಳವನ್ನುಂಟುಮಾಡಿದೆ.

ಚಂಚಲ್ ಚಂದ್ರ ಭೌಮಿಕ್ ಎಂದು ಗುರುತಿಸಲ್ಪಟ್ಟ ಬಲಿಪಶು ಖೋಕನ್ ಚಂದ್ರ ಭೌಮಿಕ್ ಅವರ ಪುತ್ರ ಮತ್ತು ಕುಮಿಲ್ಲಾ ಜಿಲ್ಲೆಯ ಲಕ್ಷ್ಮಿಪುರ ಗ್ರಾಮದ ನಿವಾಸಿ. ಅವರು ನರಸಿಂಗ್ದಿ ಪೊಲೀಸ್ ಲೈನ್ಸ್ ಬಳಿಯ ಖಾನಬರಿ ಮಸೀದಿ ಮಾರುಕಟ್ಟೆ ಪ್ರದೇಶದಲ್ಲಿರುವ ಗ್ಯಾರೇಜ್‌ನಲ್ಲಿ ಉದ್ಯೋಗಿಯಾಗಿದ್ದರು.

ಸ್ಥಳೀಯ ಮಾಧ್ಯಮ ವರದಿಗಳ ಪ್ರಕಾರ, ಭೌಮಿಕ್ ಶುಕ್ರವಾರ ರಾತ್ರಿ ತನ್ನ ಕೆಲಸವನ್ನು ಮುಗಿಸಿ ಗ್ಯಾರೇಜ್ ಒಳಗೆ ನಿದ್ರಿಸಿದ್ದರು. ಅಪರಿಚಿತ ದುಷ್ಕರ್ಮಿಗಳು ಮಲಗಿದ್ದಾಗ ಗ್ಯಾರೇಜ್‌ಗೆ ಬೆಂಕಿ ಹಚ್ಚಿದ್ದಾರೆ ಎಂದು ಆರೋಪಿಸಲಾಗಿದೆ. ಗ್ಯಾರೇಜ್‌ನಲ್ಲಿ ಹೆಚ್ಚಿನ ಪ್ರಮಾಣದ ಪೆಟ್ರೋಲ್, ಎಂಜಿನ್ ಆಯಿಲ್ ಮತ್ತು ಇತರ ದಹನಕಾರಿ ವಸ್ತುಗಳು ಇದ್ದ ಕಾರಣ, ಬೆಂಕಿ ವೇಗವಾಗಿ ಹರಡಿ ಭೌಮಿಕ್ ಒಳಗೆ ಸಿಲುಕಿಕೊಂಡರು.

ಅವರು ತೀವ್ರ ಸುಟ್ಟ ಗಾಯಗಳು ಮತ್ತು ಉಸಿರುಗಟ್ಟುವಿಕೆಯಿಂದ ಸಾವನ್ನಪ್ಪಿದರು. ಪ್ರತ್ಯಕ್ಷದರ್ಶಿಗಳು ಈ ಘಟನೆಯನ್ನು 'ಯೋಜಿತ ಕೊಲೆ' ಎಂದು ಬಣ್ಣಿಸಿದ್ದಾರೆ.

ಪೊಲೀಸರು ಹತ್ತಿರದ ಕ್ಯಾಮೆರಾಗಳಿಂದ ಸಿಸಿಟಿವಿ ದೃಶ್ಯಗಳನ್ನು ವಶಪಡಿಸಿಕೊಂಡಿದ್ದಾರೆ. ಇವು ದಾಳಿಕೋರರನ್ನು ಕೃತ್ಯದಲ್ಲಿ ಸೆರೆಹಿಡಿದಿವೆ ಎಂದು ಹೇಳಲಾಗಿದೆ. ಆದರೆ, ಶಂಕಿತರನ್ನು ಇನ್ನೂ ಗುರುತಿಸಲಾಗಿಲ್ಲ. ಅಧಿಕಾರಿಗಳು ಪ್ರಕರಣವನ್ನು ಅತ್ಯಂತ ಗಂಭೀರವಾಗಿ ಪರಿಗಣಿಸುತ್ತಿದ್ದಾರೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

## ಹಿಂದಿ ಚಿತ್ರಗಳು ತಮ್ಮ ಬೇರುಗಳನ್ನು ಕಳೆದುಕೊಂಡಿವೆ, ಹಣ ಆಧಾರಿತವಾಗಿವೆ: ಪ್ರಕಾಶ್ ರಾಜ್

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ದೃಢ, ವಿಷಯಾಧಾರಿತ ಕಥೆ ನಿರೂಪಣೆಯಿಂದ ಪ್ರಶಂಸಿಸಲಾದ ಮಲಯಾಳಂ ಮತ್ತು ತಮಿಳು ಸಿನಿಮಾಗಳಿಗಿಂತ ಭಿನ್ನವಾಗಿ, ಹಿಂದಿ ಸಿನಿಮಾ ತನ್ನ ಬೇರುಗಳನ್ನು ಕಳೆದುಕೊಂಡಿದೆ. ಹೆಚ್ಚು ಹೆಚ್ಚು ನಕಲಿ ಮತ್ತು ಹಣ–ಆಧಾರಿತವಾಗುತ್ತಿದೆ ಎಂದು ನಟ ಪ್ರಕಾಶ್ ರಾಜ್ ಹೇಳಿದರು. ಜನವರಿ 24 ರ ಶನಿವಾರ ನಡೆದ ಕೇರಳ ಸಾಹಿತ್ಯ ಉತ್ಸವದ (ಕೆಎಲ್‌ಎಫ್) ಒಂಬತ್ತನೇ ಆವೃತ್ತಿಯಲ್ಲಿ ಮಾತನಾಡಿದ ಪ್ರಶಸ್ತಿ ವಿಜೇತ ನಟ, "ಹಿಂದಿ ಸಿನಿಮಾಗಳನ್ನು ಅವುಗಳ ಕೃತಕತೆಗಾಗಿ ಟೀಕಿಸಿದರು. ಅವು ಮೇಡಮ್ ಟುಸ್ಸಾಡ್ಸ್ ವಸ್ತುಸಂಗ್ರಹಾಲಯದಂತೆ ಮಾರ್ಪಟ್ಟಿವೆ, ಅಲ್ಲಿ ಎಲ್ಲವೂ ಯಾವುದೇ ಸತ್ವವಿಲ್ಲದೆ ಸುಂದರವಾಗಿ ಕಾಣುತ್ತದೆ" ಎಂದು ಹೇಳಿದರು.

"ಪ್ರಸ್ತುತ ಸಂದರ್ಭದಲ್ಲಿ, ಮಲಯಾಳಂ ಮತ್ತು ತಮಿಳು ಸಿನಿಮಾಗಳು ಬಹಳ ಗಟ್ಟಿಕಥೆ ಸಿನಿಮಾಗಳನ್ನು ಮಾಡುತ್ತಿವೆ ಎಂದು ನಾನು ಭಾವಿಸುತ್ತೇನೆ ಮತ್ತೊಂದೆಡೆ, ಹಿಂದಿ ಸಿನಿಮಾ ತನ್ನ ಬೇರುಗಳನ್ನು ಕಳೆದುಕೊಂಡಿದೆ. ಮೇಡಮ್ ಟುಸ್ಸಾಡ್ಸ್ ವಸ್ತುಸಂಗ್ರಹಾಲಯದಲ್ಲಿ ನೀವು ನೋಡುವಂತೆ ಎಲ್ಲವೂ ಸುಂದರವಾಗಿ, ಅದ್ಭುತವಾಗಿ, ಪ್ಲಾಸ್ಟಿಕ್‌ನಂತೆ ಕಾಣುತ್ತದೆ" ಎಂದು ಟೀಕಿಸಿದರು. "ನಮಗೆ (ದಕ್ಷಿಣ) ಇನ್ನೂ ಕಥೆಗಳು ಹೇಳಬೇಕಾಗಿದೆ, ತಮಿಳಿನ ಹೊಸ ಯುವ ನಿರ್ದೇಶಕರು ದಲಿತ ಸಮಸ್ಯೆಗಳ ಬಗ್ಗೆ ಮಾತನಾಡುತ್ತಿದ್ದಾರೆ. ಅವರು ನಮಗೆ ಸಾಕಷ್ಟು ಭರವಸೆ ನೀಡುತ್ತಿದ್ದಾರೆ" ಎಂದರು. ತಮಿಳು, ತೆಲುಗು, ಹಿಂದಿ, ಕನ್ನಡ ಮತ್ತು ಮಲಯಾಳಂ ಚಿತ್ರರಂಗದಲ್ಲಿ ತಮ್ಮ ಕೆಲಸಕ್ಕೆ ಹೆಸರುವಾಸಿಯಾದ ಪ್ರಕಾಶ್ ರಾಜ್ ಪ್ರಶಂಸಿದರು.

ಹಿಂದಿ ಚಿತ್ರರಂಗವನ್ನು ಮತ್ತಷ್ಟು ವಿಶ್ಲೇಷಿಸಿದ ಪ್ರಜಾಶ್ ರಾಜ್, ಮಲ್ಟಿಪ್ಲೆಕ್ಸ್ ನಂತರದ ಯುಗಕ್ಕೆ ಅದರ ಅವನತಿಯನ್ನು ಗುರುತಿಸಿದರು. ಅದು ಮುಖ್ಯವಾಗಿ ನಗರ ಪ್ರೇಕ್ಷಕರಿಗೆ ಸೇವೆ ಸಲ್ಲಿಸಲು ಪ್ರಾರಂಭಿಸಿತು ಎಂದರು. ಗ್ಲಾಮರ್ ಮತ್ತು ಮೇಲ್ಮಟ್ಟದ ಸೌಂದರ್ಯಶಾಸ್ತ್ರದ ಮೇಲೆ ಉದ್ಯಮದ ಗಮನವು ವೀಕ್ಷಕರೊಂದಿಗೆ ಅದರ ಭಾವನಾತ್ಮಕ ಸಂಪರ್ಕವನ್ನು ದುರ್ಬಲಗೊಳಿಸಿದೆ ಎಂದು ವಾದಿಸಿದರು.

## ಆರ್‌ಜೆಡಿ ರಾಷ್ಟ್ರೀಯ ಕಾರ್ಯಕಾರಿ ಸಭೆ; ಕಾರ್ಯಕಾರಿ ಅಧ್ಯಕ್ಷರಾಗಿ ತೇಜಸ್ವಿ ನೇಮಕ

■ವಿಜಯಸಾಕ್ಷಿ ಸುದ್ದಿ, ಬಿಹಾರ



ರಾಷ್ಟ್ರೀಯ ಜನತಾ ದಳ (ಆರ್‌ಜೆಡಿ) ಮುಖ್ಯಸ್ಥ ಲಾಲು ಪ್ರಸಾದ್ ಅವರ ಕಿರಿಯ ಪುತ್ರ ತೇಜಸ್ವಿ ಯಾದವ್ ಅವರನ್ನು, ಇಂದು (ಜ.25) ನಡೆದ ರಾಷ್ಟ್ರೀಯ ಕಾರ್ಯಕಾರಿ ಸಭೆಯಲ್ಲಿ ಪಕ್ಷದ ಕಾರ್ಯಕಾರಿ ಅಧ್ಯಕ್ಷರನ್ನಾಗಿ ನೇಮಿಸಲಾಯಿತು.

'ಮಹಾಘಟಬಂಧನ್' 36 ವರ್ಷದ ನಾಯಕನನ್ನು ಮುಖ್ಯಮಂತ್ರಿ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದ ಇತ್ತೀಚಿನ ವಿಧಾನಸಭಾ ಚುನಾವಣೆಯಲ್ಲಿ ಆರ್‌ಜೆಡಿ ಸೋತ ನಂತರ ಯಾದವ್ ಅವರ ಪದೋನ್ನತಿ ಬಂದಿದೆ.

ಈ ಕುರಿತು ಪಕ್ಷದ ಎಕ್ಸ್ ಖಾತೆಯಲ್ಲಿ ಪೋಸ್ಟ್ ಮಾಡಲಾಗಿದ್ದು, ಪಕ್ಷದಲ್ಲಿ ಉತ್ತರಾಧಿಕಾರಿ ಆಯ್ಕೆ ನಿರ್ಧಾರವನ್ನು ಲಾಲು ಪ್ರಸಾದ್ ಯಾದವ್ ಮತ್ತು ಇತರ ಹಿರಿಯ ನಾಯಕರು ಭಾಗವಹಿಸಿದ್ದ ರಾಷ್ಟ್ರೀಯ ಕಾರ್ಯಕಾರಿ ಸಭೆಯಲ್ಲಿ ತೆಗೆದುಕೊಳ್ಳಲಾಗಿದೆ ಎಂದು ರಾಷ್ಟ್ರೀಯ ಜನತಾ ದಳ ಹೇಳಿದೆ.

ತೇಜಸ್ವಿ ಯಾದವ್ ಅವರ ಹಿರಿಯ ಸಹೋದರಿ ಮತ್ತು ಪಾಟಲಿಪುತ್ರ ಸಂಸದೆ ಮಿಸಾ ಭಾರ್ತಿ, ಆ ಪಕ್ಷದ ಹುದ್ದೆಯನ್ನು ಆಶಿಸುತ್ತಿದ್ದಾರೆ ಎಂದು ಹೇಳಲಾಗುತ್ತಿದ್ದ ಅವರು ಸಭೆಯಲ್ಲಿ ಹಾಜರಿದ್ದರು.

ಬಿಹಾರದ ಮಾಜಿ ಉಪಮುಖ್ಯಮಂತ್ರಿ ತೇಜಸ್ವಿ ಪ್ರಸ್ತುತ ವಿಧಾನಸಭೆಯಲ್ಲಿ ವಿರೋಧ ಪಕ್ಷದ ನಾಯಕರಾಗಿದ್ದಾರೆ. ಶನಿವಾರ ಅವರು ಪಕ್ಷದಲ್ಲಿ ತಮ್ಮ ಉನ್ನತಿಯ ಬಗ್ಗೆ ವಿಶ್ವಾಸ ಹೊಂದಿದ್ದರು. ಏಕೆಂದರೆ, ಅವರು ಆರ್‌ಜೆಡಿ ಕಚೇರಿಯಲ್ಲಿ ಕಾರ್ಯಕರ್ತರಿಗೆ ಪಕ್ಷದ ರಚನೆಯನ್ನು ಬೂತ್ ಮಟ್ಟದಿಂದ ಪುನರುಜ್ಜೀವನಗೊಳಿಸುವ ಬಗ್ಗೆ ಯೋಚಿಸುತ್ತಿರುವುದಾಗಿ ಹೇಳಿದ್ದರು.

# ಪುನೀತ್‌ರೆಡ್ಡಿ ರಾಷ್ಟ್ರ ಮಟ್ಟಕ್ಕೆ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ತಾಲೂಕಿನ ಗೊಜನೂರಿನ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ವಿದ್ಯಾರ್ಥಿ ಪುನೀತ್‌ರೆಡ್ಡಿ ಎನ್.ಎ ಜ.23ರಂದು ಹೈದ್ರಾಬಾದ್‌ನಲ್ಲಿ ನಡೆದ ಸೌತ್ ಇಂಡಿಯಾ ಸೈನ್ಸ್ ಫೆಸ್ಟ್ (ಎಸ್‌ಐಎಸ್‌ಎಫ್) ಪ್ರೌಢಶಾಲಾ ವಿದ್ಯಾರ್ಥಿಗಳ ವಿಜ್ಞಾನ ವಸ್ತು ಪ್ರದರ್ಶನದಲ್ಲಿ ಪ್ರಥಮ ಸ್ಥಾನ ಪಡೆದು ರಾಷ್ಟ್ರ ಮಟ್ಟಕ್ಕೆ ಆಯ್ಕೆಯಾಗಿದ್ದಾನೆ.

ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ, ಶಾಲಾ ಶಿಕ್ಷಣ ಇಲಾಖೆ ಮತ್ತು ಸಾಕ್ಷರತಾ ಇಲಾಖೆ, ಇಸ್ರೋ, ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತು, ಭಾರತ ಸ್ಕೌಟ್ ಮತ್ತು ಗೈಡ್ಸ್, ಆರ್ಯಭಟ, ಡ್ರೋಮ್, ಇಂಟರ್ನ್ಯಾಷನಲ್ ಲಯನ್ಸ್, ಭಾರತ ಸೇವಾದಳ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಂಶೋಧನಾ ಮತ್ತು ಕಲೆಗಳ ಪ್ರಗತಿ ಸಂಸ್ಥೆ ಸಹಯೋಗದಲ್ಲಿ ಕಳೆದ ವರ್ಷ ದೊಡ್ಡಬಳ್ಳಾಪುರದಲ್ಲಿ ನಡೆದ ರಾಜ್ಯಮಟ್ಟದ ಪ್ರಥಮ ಟೆಲಿಸ್ಕೋಪ್ ತರಬೇತಿ ಶಿಬಿರದಲ್ಲಿ ಪಾಲ್ಗೊಂಡು ವರ್ಲ್ಡ್ ಬುಕ್ ಆಫ್ ರೆಕಾರ್ಡ್ಸ್, ಇಂಡಿಯಾ ಬುಕ್ ಆಫ್ ರೆಕಾರ್ಡ್ಸ್, ಮತ್ತು ಏಷ್ಯಾ ಬುಕ್ ಆಫ್ ರೆಕಾರ್ಡ್ಸ್ ದಾಖಲಿಸಿದ್ದಾನೆ.

ರಾಜ್ಯಪಾಲರಾದ ಥಾವರಚಂದ ಗೆಹಲೋಟ್ ಪ್ರಶಸ್ತಿಯನ್ನು ಪ್ರದಾನ ಮಾಡಿದ್ದರು. ಗದಗ ಜಿಲ್ಲಾಡಳಿತದಿಂದಲೂ ವಿದ್ಯಾರ್ಥಿಯನ್ನು ಸನ್ಮಾನಿಸಿ ಅಭಿನಂದನಾ ಪತ್ರ ನೀಡಿ ಗೌರವಿಸಲಾಗಿದೆ. ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನಿಂದ ಗದಗನಲ್ಲಿ ನಡೆದ ಗದಗ ಜಿಲ್ಲಾ ಪ್ರಥಮ ಮಕ್ಕಳ ಶರಣ ಸಾಹಿತ್ಯ ಸಮ್ಮೇಳನದಲ್ಲಿ 'ಬಾಲ ಶರಣಸಿರಿ' ಪ್ರಶಸ್ತಿ ನೀಡಲಾಗಿದೆ. ವಿದ್ಯಾರ್ಥಿಯ ಸಾಧನೆಗೆ ಪ್ರಾಚಾರ್ಯ ಎನ್.ಕೆ. ಹತ್ತಿಕಾಳ, ವಿಜ್ಞಾನ ಶಿಕ್ಷಕಿ ಎಸ್.ಡಿ. ಕರೆಗೌಡ್ರ ಮತ್ತು ಶಿಕ್ಷಕ ವೃಂದ ಹರ್ಷ ವ್ಯಕ್ತಪಡಿಸಿದೆ.

### ಗ್ರಾಮದೇವತೆ ಶ್ರೀ ದ್ಯಾಮವ್ವದೇವಿ ಜಾತ್ರಾ ಮಹೋತ್ಸವ ಜ. 25ರಿಂದ 30ರವರೆಗೆ

# ಶ್ರೀ ದ್ಯಾಮವ್ವದೇವಿ ಜಾತ್ರೆಗೆ ಭರದ ಸಿದ್ಧತೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಗ್ರಾಮಗಳನ್ನು ಕಾಪಾಡುವ ದೈವ ಗ್ರಾಮದೇವತೆಯ ದೇವಸ್ಥಾನಗಳು ನಮ್ಮೆಲ್ಲರ ಧಾರ್ಮಿಕ ಪ್ರತೀಕವಾಗಿದ್ದು, ಶಿಗ್ಲಿ ಗ್ರಾಮದ ರೈತರ ಓಣಿಯಾಗಿರುವ ಈ ಜಾಗೆಯಲ್ಲಿ ಪುರಾತನ ಇತಿಹಾಸವನ್ನು ಹೊಂದಿರುವ ಗ್ರಾಮದೇವತೆ ಶ್ರೀ ದ್ಯಾಮವ್ವದೇವಿ ದೇವಸ್ಥಾನ ಕಳೆದ 5 ವರ್ಷಗಳ ಹಿಂದೆ ಜೀರ್ಣೋದ್ಧಾರಗೊಂಡ ನಂತರ ಇದರ ಪ್ರಥಮ ಜಾತ್ರೆಯು ಇದೇ ಜ. 25ರಿಂದ 30ರವರೆಗೆ ಅದ್ದೂರಿಯಾಗಿ ಹಾಗೂ ಸಾಂಪ್ರದಾಯಿಕವಾಗಿ ನಡೆಯಲಿದ್ದು, ಅದಕ್ಕಾಗಿ ಗ್ರಾಮದಲ್ಲಿ ಎಲ್ಲೆಡೆ ಸಿದ್ಧತೆಗಳು ನಡೆಯುತ್ತಿವೆ ಎಂದು ಹಿರಿಯ ವಕೀಲ, ಜಿ.ಪಂ ಮಾಜಿ ಅಧ್ಯಕ್ಷ ಎಸ್.ಪಿ. ಬಳಿಗಾರ ತಿಳಿಸಿದರು.

ಅವರು ದೇವಸ್ಥಾನದ ಆವರಣದಲ್ಲಿ ಶನಿವಾರ ಜಾತ್ರಾ ಸಿದ್ಧತೆಗಳ ಕುರಿತು ನಡೆದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದರು.

ಜ. 25ರಂದು ಗ್ರಾಮದ ಎಲ್ಲ ದೇವರುಗಳಿಗೆ ಅಭಿಷೇಕ, ನೈವೇದ್ಯ, ಜ. 26ರಂದು ಧ್ವಜಾರೋಹಣ, ಅಂಕಿ ಹಾಕುವದು ಹಾಗೂ ಘಟ್ಟಿ ಗಡಿಗೆ ಪೂಜಾ ಕಾರ್ಯಕ್ರಮ ನಡೆಯಲಿದೆ. ಜ. 27ರಂದು ಶ್ರೀ ದೇವಿಗೆ ಕಲಾವೃದ್ಧಿ ಮಾಡುವದು, ರಾತ್ರಿ ಶೃಂಗರಿಸಿದ ರಥದಲ್ಲಿ ಸಕಲ ವಾದ್ಯ ವೈಭವಗಳೊಂದಿಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ದೇವಿಯ ಮೆರವಣಿಗೆ ಹೊರಡುವದು. ಜ. 28ರಂದು ಶ್ರೀ ದೇವಿಯ ಚೌತಮನೆ ಕಟ್ಟೆಯಲ್ಲಿ ಪ್ರತಿಷ್ಠಾಪಿಸುವದು, ರಂಗ ಹೊಯ್ಯುವದು, ಹುಲುಸು ಚೆಲ್ಲುವದು, ಉಡಿ ತುಂಬುದು, ಹರಕೆ, ಕಾಣಿಕೆ ಸಲ್ಲಿಸುವದು ನಡೆಯಲಿದೆ. ಜ. 29ರಂದು ಶ್ರೀ ದೇವಿ ಗಡಿ ಹೋಗುವದು, ಜ. 30ರಂದು ಬ್ರಾಹ್ಮಿ ಮುಹೂರ್ತದಲ್ಲಿ ಶ್ರೀ ದೇವಿಯನ್ನು ಗರ್ಭಗುಡಿಯಲ್ಲಿ ಪುನರ್ ಪ್ರತಿಷ್ಠಾಪಿಸುವದು, ಉಡಿ ತುಂಬುವದು ಸೇರಿದಂತೆ ಅನೇಕ ಧಾರ್ಮಿಕ ಸಂಪ್ರದಾಯಗಳು ನಡೆಯಲಿವೆ. ಈ ಎಲ್ಲ ಕಾರ್ಯಕ್ರಮಗಳಿಗೆ ಭರದ ಸಿದ್ಧತೆ ಮಾಡಿಕೊಳ್ಳಲಾಗಿದ್ದು, ಇಡೀ ಗ್ರಾಮವೇ ಶೃಂಗಾರಗೊಳ್ಳಲಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ದೇವಸ್ಥಾನ ಸಮಿತಿ ಅಧ್ಯಕ್ಷ ರವಿ ಕೂಸನೂರ, ಡಿ.ವೈ. ಹುನಗುಂದ, ಮರಬಸಪ್ಪ ಗೋಣೆಪ್ಪನವರ, ಚನ್ನಬಸಪ್ಪ ಅಣ್ಣಿಗೇರಿ, ಪರಮೇಶಪ್ಪ ಅಣ್ಣಿಗೇರಿ, ಸತೀಶ ಅಣ್ಣಿಗೇರಿ, ಲಕ್ಷ್ಮಣ ಬಿ, ಪ್ರಕಾಶ ಬೆಟಗೇರಿ, ರಾಮಣ್ಣ ಲಮಾಣಿ (ಶಿಗ್ಲಿ), ಯಲ್ಲಪ್ಪ ತಳವಾರ, ಪ್ರವೀಣ ಕಾಳಪ್ಪನವರ, ಬಿ.ಎಂ. ತೋಟದ, ರಮೇಶ ಬಾರ್ಕಿ, ಮಹಾದೇವಪ್ಪ ಹುಲಗೂರ, ನೀಲಪ್ಪಗೌಡ ಪಾಟೀಲ, ಮಲ್ಲೇಶ ಪಿರೋಜ, ಬಸವರಾಜ ಹಂಜಿ, ದೇವಪ್ಪ ವಾಲೀಕಾರ, ಶಿವಪ್ಪ ಕೆಸರಳ್ಳಿ ಮುಂತಾದವರಿದ್ದರು.

ಸುಮಾರು 5 ವರ್ಷಗಳ ಹಿಂದೆ ದೇವಸ್ಥಾನವನ್ನು ಸುಮಾರು 1 ಕೋಟಿ ರೂಗಳಿಗೂ ಅಧಿಕ ಹಣದಿಂದ ಜೀರ್ಣೋದ್ಧಾರಗೊಳಿಸಲಾಗಿದ್ದು, ಯಾವುದೇ ಸರಕಾರದ ಅನುದಾನವಿಲ್ಲದೆ ಭಕ್ತರಿಂದಲೇ ಸಂಗ್ರಹವಾಗಿ ಸಂಪೂರ್ಣ ಶಿಲೆಯಿಂದ ನಿರ್ಮಿಸಲಾಗಿರುವ ದೇವಸ್ಥಾನ ಇದಾಗಿದೆ. 5 ವರ್ಷಗಳ ನಂತರ ಶ್ರೀ ದೇವಿಗೆ ಬಣ್ಣ ತುಂಬಿ ಮತ್ತೆ ಪ್ರತಿಷ್ಠಾಪನೆ ಮಾಡಲಿದ್ದು, ಅದಕ್ಕಾಗಿ ಈ ವರ್ಷ ಅದ್ದೂರಿಯಾಗಿ ಜಾತ್ರಾ ಮಹೋತ್ಸವ ಹಮ್ಮಿಕೊಳ್ಳಲಾಗಿದೆ.

## ರಾಜ್ಯಪಾಲರಿಂದ ಪ್ರಶಸ್ತಿ ಪಡೆದ ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್




■ವಿಜಯಸಾಕ್ಷಿ ಸುದ್ದಿ, ಗದಗ

16ನೇ ರಾಷ್ಟ್ರೀಯ ಮತದಾರರ ದಿನಾಚರಣೆ ಅಂಗವಾಗಿ ಚುನಾವಣಾ ಕಾರ್ಯದಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿದಕ್ಕಾಗಿ ಗದಗ ಜಿಲ್ಲೆಯ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್ ಅವರು ರಾಜ್ಯ ಮಟ್ಟದ ಪ್ರಶಸ್ತಿಗೆ ಭಾಜನರಾಗಿದ್ದಾರೆ.

ಬೆಳಗಾವಿ ವಿಭಾಗ ಮಟ್ಟದಲ್ಲಿ ಅತ್ಯುತ್ತಮ ಸಹಾಯಕ ಚುನಾವಣಾಧಿಕಾರಿಯಾಗಿ ಕಾರ್ಯನಿರ್ವಹಿಸಿದ್ದಕ್ಕಾಗಿ ಇವರನ್ನು ಆಯ್ಕೆ ಮಾಡಲಾಗಿದ್ದು, ರವಿವಾರ ಬೆಂಗಳೂರಿನ ಪುಟ್ಟಣ್ಣ ಚೆಟ್ಟಿ ಸಭಾಂಗಣದಲ್ಲಿ ಜರುಗಿದ ವಿಶೇಷ ಸಮಾರಂಭದಲ್ಲಿ ರಾಜ್ಯಪಾಲರಾದ ಥಾವರಚಂದ್ ಗೆಹ್ಲೋಟ್ ಅವರು ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಿದರು.

ಡಾ. ದುರಗೇಶ್ ಕೆ.ಆರ್ ಅವರು ತಮ್ಮ ಸೇವಾವಧಿಯಲ್ಲಿ ಚುನಾವಣಾ ಪ್ರಕ್ರಿಯೆಯನ್ನು ಪಾರದರ್ಶಕವಾಗಿ, ಶಿಸ್ತಿನಿಂದ ಹಾಗೂ ಯಶಸ್ವಿಯಾಗಿ ನಿರ್ವಹಿಸಿ ಎಲ್ಲರ ಮೆಚ್ಚುಗೆಗೆ ಪಾತ್ರರಾಗಿದ್ದರು. ಮತದಾರರ ಜಾಗೃತಿ, ಶಾಂತಿಯುತ ಚುನಾವಣೆ ಹಾಗೂ ಸುಸೂತ್ರ ನಿರ್ವಹಣೆಗೆ ನೀಡಿದ ಕೊಡುಗೆಯನ್ನು ಪರಿಗಣಿಸಿ ಚುನಾವಣಾ ಆಯೋಗವು ಈ ಗೌರವ ನೀಡಿದೆ. ಗದಗ ಜಿಲ್ಲೆಯಿಂದ ರಾಜ್ಯ ಮಟ್ಟದ ಪ್ರಶಸ್ತಿ ದೊರೆತಿರುವುದು ಜಿಲ್ಲೆಯ ಆಡಳಿತಕ್ಕೆ ಮತ್ತೊಂದು ಹೆಮ್ಮೆಯ ಕ್ಷಣವಾಗಿದ್ದು, ಸಾರ್ವಜನಿಕ ವಲಯದಲ್ಲಿ ಹರ್ಷ ವ್ಯಕ್ತವಾಗಿದೆ.

# ಗದಗ ಜಿಲ್ಲಾ ಕಾಂಗ್ರೆಸ್‌ನಿಂದ 77ನೇ ಗಣರಾಜ್ಯೋತ್ಸವ ದಿನಾಚರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿರುವ ಜಿಲ್ಲಾ ಕಾಂಗ್ರೆಸ್ ಕಾರ್ಯಾಲಯದಲ್ಲಿ ಜನವರಿ 26ರಂದು ಸೋಮವಾರ ಬೆಳಿಗ್ಗೆ 8.30 ಗಂಟೆಗೆ 77ನೇ ಗಣರಾಜ್ಯೋತ್ಸವ ದಿನಾಚರಣೆ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಗದಗ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ಅಶೋಕ ಮಂ ಗದಗ ಜಿಲ್ಲಾ ಕಾಂಗ್ರೆಸ್ ಕಮಿಟಿಯ ಅಧ್ಯಕ್ಷರೂ ಆಗಿರುವ, ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ ಕಾರ್ಯಕ್ರಮದ ಧ್ವಜಾರೋಹಣವನ್ನು ನೆರವೇರಿಸಲಿದ್ದಾರೆ. ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯ ಉಪಾಧ್ಯಕ್ಷ ಡಿ.ಆರ್. ಪಾಟೀಲ, ಮಾಜಿ ಶಾಸಕ ಬಿ.ಆರ್. ಯಾವಗಲ್, ಜಿ.ಎಸ್. ಗಡ್ಡದೇವರಮಠ, ರಾಮಣ್ಣ ಲಮಾಣಿ, ರಾಮಕೃಷ್ಣ ದೊಡ್ಡಮನಿ, ಪಕ್ಷದ ಮುಖಂಡರಾದ ಆನಂದಸ್ವಾಮಿ ಗಡ್ಡದೇವರಮಠ, ಸುಜಾತಾ ದೊಡ್ಡಮನಿ, ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಕೃಷ್ಣಗೌಡ ಎಚ್.ಪಾಟೀಲ ಪಾಲ್ಗೊಳ್ಳುವರು. ದಾಲಿ ತಿಳಿಸಿದ್ದಾರೆ.



ಕಾರ್ಯಕ್ರಮಕ್ಕೆ ಕಾಂಗ್ರೆಸ್ ಪಕ್ಷದ ಮಾಜಿ ಹಾಗೂ ಹಾಲಿ ಶಾಸಕರು, ಪಕ್ಷದ ಜಿಲ್ಲಾ ಪಧಾದಿಕಾರಿಗಳು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು, ಜಿಲ್ಲಾ ಪಂಚಾಯಿತಿ, ತಾಲೂಕು ಪಂಚಾಯಿತಿ, ಗ್ರಾಮ ಪಂಚಾಯಿತಿ, ಎಪಿಎಂಸಿ ಪಕ್ಷದ ಅಧ್ಯಕ್ಷರು ಹಾಗೂ ಸದಸ್ಯರು, ನಗರಸಭೆ, ಪಟ್ಟಣ ಪಂಚಾಯಿತಿ, ಪುರಸಭೆ ಅಧ್ಯಕ್ಷರು ಹಾಗೂ ಸದಸ್ಯರು, ಮಹಿಳಾ ಕಾಂಗ್ರೆಸ್, ಯುವ ಕಾಂಗ್ರೆಸ್, ಎಸ್‌ಸಿ/ಎಸ್‌ಟಿ, ಅಲ್ಪಸಂಖ್ಯಾತರ, ವಿದ್ಯಾರ್ಥಿ ಕಾಂಗ್ರೆಸ್, ಕಾಂಗ್ರೆಸ್ ಸೇವಾದಳ, ಹಿಂದುಳಿದ ವರ್ಗ, ಸಾಮಾಜಿಕ ಜಾಲತಾಣ, ರಾಜೀವಗಾಂಧಿ ಪಂಚಾಯತ್ ಸಂಘಟನೆ, ಮಾಜಿ ಸೈನಿಕರ ವಿಭಾಗ, ಮೀನುಗಾರ್ರ ವಿಭಾಗ, ಕಾರ್ಮಿಕರ ವಿಭಾಗ, ಐಎನ್‌ಟಿಯುಸಿ ಕಾನೂನು ಮತ್ತು ಮಾನವ ಹಕ್ಕು ವಿಭಾಗ, ಕಿಸಾನ್ ಮತ್ತು ಖೇತ್ ಮಜದೂರ ವಿಭಾಗ, ಮಾಜಿ ಸೈನಿಕರ ವಿಭಾಗ, ವೈದ್ಯರ ವಿಭಾಗ, ವೃತ್ತಿಪರ ವಿಭಾಗ, ಪದವೀಧರ ಹಾಗೂ ಶಿಕ್ಷಕರ ವಿಭಾಗ, ನೀತಿ ಮತ್ತು ಸಂಶೋಧನೆ ತರಬೇತಿ ವಿಭಾಗ, ವಿಕಲಚೇತನರ ವಿಭಾಗ, ಲಿಗಲ್ ರೀಪಾರ್ಮ್ಸ್ ವಿಭಾಗ, ಐಟಿ ಮತ್ತು ಡಾಟಾ ವಿಭಾಗ, ಮಾಧ್ಯಮ ಮತ್ತು ಸಂಪರ್ಕ ಇಲಾಖೆ ವಿಭಾಗಗಳ ಅಧ್ಯಕ್ಷರು ಹಾಗೂ ಸದಸ್ಯರು, ಪಕ್ಷದ ಅಭಿಮಾನಿಗಳು ಪಾಲ್ಗೊಳ್ಳಬೇಕೆಂದು ಜಿಲ್ಲಾ ಕಾಂಗ್ರೆಸ್ ಕಮಿಟಿಯ ಪ್ರಧಾನ ಕಾರ್ಯದರ್ಶಿ ವಿ.ವಿ. ಸೋಮನಕಟ್ಟಿಮಠ, ಗದಗ-ಬೆಟಗೇರಿ ಶಹರ ಕಾಂಗ್ರೆಸ್ ಸಮಿತಿಯ ಅಧ್ಯಕ್ಷರಾದ ಬಿ.ಬಿ. ಅಸೂಟಿ ಹಾಗೂ ಗದಗ ಜಿಲ್ಲಾ ಪ್ರಚಾರ ಸಮೊತಿ ಅಧ್ಯಕ್ಷ ಅಶೋಕ

# ಮತದಾರರ ಜಾಗೃತಿಗಾಗಿ ಚಿತ್ರಕಲಾ ಪ್ರದರ್ಶನ

■ವಿಜಯಸಾಕ್ಷಿ ಸುದ್ದಿ, ಗದಗ

ರಾಷ್ಟ್ರೀಯ ಮತದಾರರ ದಿನಾಚರಣೆ ಅಂಗವಾಗಿ ಜಿಲ್ಲಾಡಳಿತ ಭವನದಲ್ಲಿ ಮತದಾನದ ಪ್ರಾಮುಖ್ಯತೆ ಮತ್ತು ಜಾಗೃತಿ ಮೂಡಿಸುವ ಚಿತ್ರಕಲಾ ಪ್ರದರ್ಶನವನ್ನು ಆಯೋಜಿಸಲಾಗಿತ್ತು. ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಡಾ. ನಂದಾ ಹನಬರಟ್ಟಿ ಅವರು ಮತದಾನದನ ಪ್ರಾಮುಖ್ಯತೆ ಕುರಿತು ರಚಿಸಿದ ಚಿತ್ರಗಳ ಚಿತ್ರಕಲಾ ಪ್ರದರ್ಶನವನ್ನು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಅವರು ವೀಕ್ಷಿಸಿ ಮೆಚ್ಚುಗೆ ವ್ಯಕ್ತ ಪಡಿಸಿದರು.



ಈ ಸಂದರ್ಭದಲ್ಲಿ ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಜಿಲ್ಲಾ ನಗರಾಭಿವೃದ್ಧಿಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೋಟೂರ, ಡಿ.ಎಸ್.ಪಿ ಮುರ್ತುಜಾ ಖಾದ್ರಿ, ಜಿ.ಪಂ ಮುಖ್ಯ ಯೋಜನಾ ನಿರ್ದೇಶಕ ಎಂ.ಎಂ. ಕಂಬಾಳಿಮಠ, ತಹಸೀಲ್ದಾರ ಶ್ರೀನಿವಾಸಮೂರ್ತಿ ಕುಲಕರ್ಣಿ, ಆಹಾರ ಇಲಾಖೆ ಉಪನಿರ್ದೇಶಕ ರಮೇಶ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಡಾ. ನಂದಾ ಹನಬರಟ್ಟಿ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು, ವಿಧ್ಯಾರ್ಥಿಗಳು ಚಿತ್ರಕಲಾ ಪ್ರದರ್ಶನ ವೀಕ್ಷಿಸಿದರು.

## ರಾಷ್ಟ್ರೀಯ ಮತದಾರರ ದಿನಾಚರಣೆ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್

# ಸಂವಿಧಾನಾತ್ಮಕ ಮತದಾನದ ಹಕ್ಕನ್ನು ತಪ್ಪದೇ ಚಲಾಯಿಸಿ




18 ವರ್ಷ ಮೇಲ್ಪಟ್ಟ ಯುವ ಮತದಾರರು ಈಗಿನಿಂದಲೇ ಉತ್ತಮ ನಾಯಕರನ್ನು ಆರಿಸುವ ಪರಿಪಾಠ ಬೆಳೆಸಿಕೊಳ್ಳಬೇಕು. ಅರ್ಹ ಮತದಾರರು ಮತದಾನ ಪ್ರಕ್ರಿಯೆಯಲ್ಲಿ ಪಾಲ್ಗೊಂಡು, ತಮ್ಮ ಮತವನ್ನು ತಪ್ಪದೇ ಚಲಾಯಿಸುವುದರ ಮೂಲಕ ಸಶಕ್ತ ಸಮಾಜ ನಿರ್ಮಾಣಕ್ಕೆ ಮುಂದಾಗುವಂತೆ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರು ಕರೆ ನೀಡಿದರು.

ಯಾವುದೇ ರಾಷ್ಟ್ರ ಮುಂದುವರೆಯಬೇಕಾದರೆ ಯುವಜನತೆಯವ ಪಾತ್ರ ಬಹುಮುಖ್ಯವಾಗಿದೆ. ಚುನಾವಣಾ ಆಯೋಗವು ಯುವಜನತೆಗಾಗಿ ಮತದಾನದ ಹಾಗೂ ಮತದಾರರ ಪಟ್ಟಿಗೆ ಸೇರ್ಪಡೆ ಕುರಿತು ಅನೇಕ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದ್ದು, ಇದರ ಸದುಪಯೋಗ ಪಡೆದುಕೊಳ್ಳಬೇಕು ಹಾಗೂ ಈ ಕುರಿತು ಇತರರಿಗೂ ಮಾಹಿತಿ ನೀಡಿ ಅವರನ್ನೂ ಕೂಡ ಮತದಾನ ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳುವಂತೆ ಪ್ರೇರೇಪಿಸಲು ಸಿ.ಎಸ್. ಶಿವನಗೌಡ್ರ ತಿಳಿಸಿದರು.

■ವಿಜಯಸಾಕ್ಷಿ ಸುದ್ದಿ, ಗದಗ

ಸದೃಢ ಸಮಾಜ, ಸದೃಢ ರಾಷ್ಟ್ರ ನಿರ್ಮಾಣ ಮಾಡುವಲ್ಲಿ ಮತದಾನದ ಪಾತ್ರ ಬಹು ಮುಖ್ಯವಾಗಿದ್ದು, ಮತದಾನದ ಹಕ್ಕನ್ನು ಪಡೆದ ಪ್ರತಿಯೊಬ್ಬ ಅರ್ಹ ಮಾತದಾರರು ಚುನಾವಣೆಗಳಲ್ಲಿ ತಪ್ಪದೇ ತಮ್ಮ ಹಕ್ಕನ್ನು ಚಲಾಯಿಸುವಂತೆ ಜಿಲ್ಲಾಧಿಕಾರಿ ಸಿ.ಎನ್. ಶ್ರೀದರ್ ತಿಳಿಸಿದರು.

ಜಿಲ್ಲಾಡಳಿತ ಭವನದ ಆಡಿಟೋರಿಯಂ ಸಭಾಂಗಣದಲ್ಲಿ ರವಿವಾರ ಜರುಗಿದ ರಾಷ್ಟ್ರೀಯ ಮತದಾರರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಂವಿಧಾನಾತ್ಮಕವಾಗಿ ನೀಡಿದ ಹಕ್ಕನ್ನು ಬಳಸುವುದರ ಮೂಲಕ ಸಮಾಜಕ್ಕೆ ಉತ್ತಮ ನಾಯಕರನ್ನು ಆಯ್ಕೆ ಮಾಡುವಂತ ಸುವರ್ಣ ಅವಕಾಶವನ್ನು ಮತದಾರರು ಕಳೆದುಕೊಳ್ಳಬಾರದು. ತಮ್ಮ ಅಮೂಲ್ಯವಾದ ಮತದಿಂದ ಸಮಾಜ, ರಾಷ್ಟಕ್ಕೆ ಉತ್ತಮವಾದವರನ್ನು ಆಯ್ಕೆ ಮಾಡುವುದು ಪ್ರತಿಯೊಬ್ಬ ಅರ್ಹ ಮತದಾರರ ಆದ್ಯ ಕರ್ತವ್ಯವಾಗಿದೆ ಎಂದರು.

ಮತದಾನದ ಮಹತ್ವ ಹಾಗೂ ಯುವ ಮತದಾರರನ್ನು ಮತದಾರರ ಪಟ್ಟಿಗೆ ಸೇರಿಸುವ ಉದ್ದೇಶದೊಂದಿಗೆ ಚುನಾವಣಾ ಆಯೋಗದಿಂದ ರಾಷ್ಟ್ರೀಯ ಮತದಾರರ ದಿನವನ್ನು ಕಳೆದ 15 ವರ್ಷಗಳಿಂದ ಆಚರಿಸಲಾಗುತ್ತಿದೆ. ಸಂವಿಧಾನ ನಮಗೆ ನೀಡಿದ ಮತದಾನದ ಹಕ್ಕನ್ನು ಚಲಾಯಿಸುವುದನ್ನು ಯಾರೂ ಕೂಡ ಮರೆಯಬಾರದು ಎನ್ನುವ ಉದ್ದೇಶದೊಂದಿಗೆ ಈ ಕಾರ್ಯಕ್ರಮ ಆಯೋಜಿಸಲಾಗುತ್ತಿದೆ. ಮತದಾನದ ದಿನಗಳಂದು ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಮತದಾನ ಪ್ರಮಾಣ ಕಡಿಮೆ ಆಗುತ್ತಿರುವುದು ಕಳಕವಳಕಾರಿ ಸಂಗತಿಯಾಗಿದೆ ಎಂದರು.

ಜಿಲ್ಲಾ ಕಾನೂನು ಸೇವೆಗಳ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ ಮಾತನಾಡಿ, ದೇಶದ ಪ್ರಜಾಪ್ರಭುತ್ವ ಉಳಿಯಬೇಕಾದರೆ ಪ್ರತಿಯೊಬ್ಬರೂ ತಮ್ಮ ಮತದಾನದ ಹಕ್ಕನ್ನು ತಪ್ಪದೇ ಚಲಾಯಿಸಬೇಕು. ಸಂವಿಧಾನ ನಮಗೆ ಮತಾದಾನದನದ ಹಕ್ಕನ್ನು ನೀಡಿದ್ದು, ಪ್ರತಿ ಚುನಾವಣೆಗಳಲ್ಲಿ ಮತದಾನ ಮಾಡುವುದು ನಮ್ಮ ಮೂಲಭೂತ ಕರ್ತವ್ಯವಾಗಿದೆ. ಮತದಾರರಲ್ಲಿ ಜಾಗೃತಿ ಹಾಗೂ ಹೊಸ ಮತದಾರರನ್ನು ಮತದಾರರ ಪಟ್ಟಿಗೆ ಸೇರಿಸುವ ಉದ್ದೇಶದೊಂದಿಗೆ ಈ ಕಾರ್ಯಕ್ರಮವನ್ನು ಆಯೋಜಿಸಲಾಗುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರ ಬಸನಗೌಡ ಕೋಟೂರ, ಡಿ.ಎಸ್.ಪಿ ಮುರ್ತುಜಾ ಖಾದ್ರಿ, ಜಿ.ಪಂ ಮುಖ್ಯ ಯೋಜನಾ ನಿರ್ದೇಶಕ ಕಂಬಾಳಿಮಠ, ತಹಸೀಲ್ದಾರ ಶ್ರೀನಿವಾಸಮೂರ್ತಿ ಕುಲಕರ್ಣಿ, ಆಹಾರ ಇಲಾಖೆ ಉಪನಿರ್ದೇಶಕ ರಮೇಶ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಡಾ. ನಂದಾ ಹನಬರಟ್ಟಿ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು, ವಿಧ್ಯಾರ್ಥಿಗಳು ಉಪಸ್ಥಿತರಿದ್ದರು. ಉಪವಿಭಾಗಾಧಿಕಾರಿ ಗಂಗಪ್ಪ ಎಂ ಸ್ವಾಗತಿಸಿದರು.

ಕಾರ್ಯಕ್ರಮದಲ್ಲಿ ಯುವ ಮತದಾರರಿಗೆ ಮತಾದಾನ ಗುರುತಿನ ಚೀಟಿ ವಿತರಣೆ, ಮತದಾರರ ನೋಂದಣಿ ಕಾರ್ಯದಲ್ಲಿ ಉತ್ತಮ ಕಾರ್ಯ ನಿರ್ವಹಿಸಿದ ಬಿ.ಎಲ್.ಓ, ಡಾಟಾ ಎಂಟ್ರಿ ಆಪರೇಟರ್, ಪ್ರಬಂಧ ಸ್ಪರ್ಧೆ ವಿಜೇತರುಗಳಿಗೆ ಪ್ರಶಸ್ತಿ ಪತ್ರ ನೀಡಿ ಸನ್ಮಾನಿಸಲಾಯಿತು.

ಇದೇ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಮತದಾನ ಪ್ರತಿಜ್ಞಾ ವಿಧಿ ಬೋಧಿಸಿದರು.

# ಗುಜರಾತ್ ಸೇರಿದಂತೆ ಇತರ ರಾಜ್ಯಗಳಲ್ಲಿ 'ಮತ ಕಳ್ಳತನ'ಕ್ಕೆ ಎಸ್‌ಐಆರ್ ಬಳಕೆ: ರಾಹುಲ್ ಗಾಂಧಿ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

, ದೇಶದಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿಗಳ ವಿಶೇಷ ತೀವ್ರ ಪರಿಷ್ಕರಣೆಯ ಕುರಿತ ತಮ್ಮ ವಾಗ್ದಾಳಿಯನ್ನು ಲೋಕಸಭೆ ವಿರೋಧ ಪಕ್ಷದ ನಾಯಕ ಮತ್ತು ಕಾಂಗ್ರೆಸ್ ಸಂಸದ ರಾಹುಲ್ ಗಾಂಧಿ ತೀವ್ರಗೊಳಿಸಿದ್ದಾರೆ. ಗುಜರಾತ್ ಸೇರಿದಂತೆ ಇತರ ರಾಜ್ಯಗಳಲ್ಲಿ ಯೋಜಿತ ಮತ್ತು ಕಾರ್ಯತಂತ್ರದ ಮತ ಕಳ್ಳತನ ಎಂದು ಅವರು ಕರೆದಿದ್ದಾರೆ. ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ ರಾಹುಲ್ ಗಾಂಧಿ, ವಿಶೇಷ ತೀವ್ರ ಪರಿಷ್ಕರಣೆ ನಡೆಸಲಾದಲ್ಲೆಲ್ಲಾ ಇದೇ ರೀತಿಯ ಮಾದರಿ ಹೊರಹೊಮ್ಮಿದೆ ಎಂದು ಹೇಳಿದ್ದಾರೆ. ಆಡಳಿತಾತ್ಮಕ ಪ್ರಕ್ರಿಯೆಯಾಗಿ ಪ್ರಸ್ತುತಪಡಿಸಲಾದ ಈ ಪ್ರಕ್ರಿಯೆಯು ವಾಸ್ತವವಾಗಿ ಚುನಾವಣೆಗಳನ್ನು ಕುಶಲತೆಯಿಂದ ನಿರ್ವಹಿಸುವ ಉದ್ದೇಶಪೂರ್ವಕ ಪ್ರಯತ್ನವಾಗಿದೆ ಎಂದು ಅವರು ಆರೋಪಿಸಿದ್ದಾರೆ. "ಎಸ್‌ಐಆರ್ ಇರುವಲ್ಲೆಲ್ಲಾ ಮತ ಕಳ್ಳತನವಿದೆ. ಗುಜರಾತ್‌ನಲ್ಲಿ ನಡೆಯುತ್ತಿರುವುದು ಆಡಳಿತಾತ್ಮಕ ಕಾರ್ಯವಿಧಾನವಲ್ಲ. ಇದು ಮತಗಳನ್ನು ಕದಿಯಲು ಉದ್ದೇಶಪೂರ್ವಕ, ಸಂಘಟಿತ ಮತ್ತು ಕಾರ್ಯತಂತ್ರದ ಪ್ರಯತ್ನವಾಗಿದೆ" ಎಂದು ಅವರು ಹೇಳಿದರು.






VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka